ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 177 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 27–01–2024 ಶನಿವಾರ ಪುಟ: 4 ಬೆಲೆ : ರೂ.2–00
Volume - 01 Issue - 177 Title- Code: KARKAN 28269 Chitradurga Date: 27-01-2024 Saturday Page: 4 Price: Rs. 2-00

ಒಳಪುಟದ ಸುದ್ದಿಗಳು
ಶೋಷಿತರ ಜಾಗೃತಿ ಸಮಾವೇಶ: ವಾಹನಗಳ ಸಂಚಾರ ಮಾರ್ಗ ಬದಲಾವಣೆ 2
ಸಂವಿಧಾನ ಸ್ತಬ್ಧಚಿತ್ರ ವಾಹನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಸುಧಾಕರ್ ಚಾಲನೆ 3
ಕೇಂದ್ರದ ರೈತ ವಿರೋಧಿ ನೀತಿ ಖಂಡಿಸಿ ಬೈಕ್‌ರ್‍ಯಾಲಿ 4

ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ತೃಪ್ತಿಗೂ ಯಶಸ್ಸಿಗೂ ಭೇದವಿದೆ. ಯಶಸ್ಸು ಬೇರೆಯವರಿಂದ ಅಳೆಯಲ್ಪಟ್ಟರೆ, ತೃಪ್ತಿ ನಮ್ಮೊಳಗೇ ಇರುವ ಸಂಗತಿ. ಯಶಸ್ಸಿನಲ್ಲೂ ತೃಪ್ತಿಯಿರಲಿ

» ಶುಭೋದಯ

ಫಾಸ್ಟ್ ನ್ಯೂಸ್

ವಾರ್ತಾ ಇಲಾಖೆಯಲ್ಲಿ ಗಣರಾಜ್ಯೋತ್ಸವ ಆಚರಣೆ

» ಚಿತ್ರದುರ್ಗ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ 75 ನೇ ಗಣರಾಜ್ಯೋತ್ಸವ ಆಚರಣೆ ಮಾಡಲಾಯಿತು. ಜಿಲ್ಲಾಧಿಕಾರಿಗಳ ಕಚೇರಿ ಹಿಂಭಾಗದ ವಾರ್ತಾ ಭವನದಲ್ಲಿ ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ರಾಷ್ಟ್ರ ಧ್ವಜರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಿಬ್ಬಂದಿಗಳಾದ ಪಿ.ಎಂ. ವೇಣುಗೋಪಾಲ, ಜಿ.ವೆಂಕಟೇಶ್, ಎಸ್. ಚಂದ್ರಶೇಖರ್, ಎಂ.ಜೆ.ಬೋರೇಶ, ಅಂಜಿನ ಮೂರ್ತಿ, ಅಪ್ರೆಂಟಿಸ್ ತರಬೇತಾರ್ಥಿ ಕಾಟೇಶ್ ಇದ್ದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್‌ರಿಂದ ಧ್ವಜಾರೋಹಣ

» ಚಿತ್ರದುರ್ಗ

75ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಶುಕ್ರವಾರ ರಾಷ್ಟ್ರ ಧ್ವಜರೋಹಣ ನೆರವೇರಿಸಿ, ಎಲ್ಲ ಅಧಿಕಾರಿ, ಸಿಬ್ಬಂದಿಗಳಿಗೆ ಗಣರಾಜ್ಯೋತ್ಸವದ ಶುಭಾಷಯ ಕೋರಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು.

ಡಿಸಿಎಂ ಶಿವಕುಮಾರ್ ಪ್ರವಾಸ ಕಾರ್ಯಕ್ರಮ

» ಚಿತ್ರದುರ್ಗ

ರಾಜ್ಯದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಜ. 28 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಹಮ್ಮಿಕೊಂಡಿದ್ದಾರೆ. ಉಪಮುಖ್ಯಮಂತ್ರಿಗಳು ಅಂದು ಬೆಳಿಗ್ಗೆ ಕೊಪ್ಪಳದಿಂದ ಹೊರಟು, ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ನಂತರ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಕರ್ನಾಟಕ ಶೋಷಿತ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಸಂಯುಕ್ತ ಆಶ್ರಯದ "ಶೋಷಿತ ಜಾಗೃತಿ ಸಮಾವೇಶ" ದಲ್ಲಿ ಭಾಗವಹಿಸುವರು.

75ನೇ ಗಣರಾಜ್ಯೋತ್ಸವ ಆಚರಣೆ

ಪಂಚಭಾಗ್ಯ ಜಾರಿಯಿಂದ ಬಡವರು, ಮಹಿಳೆಯರು ಮುಖ್ಯ ವಾಹಿನಿಗೆ: ಉಸ್ತುವಾರಿ ಸಚಿವ ಡಿ.ಸುಧಾಕರ್

» ಚಿತ್ರದುರ್ಗ

ದೇಶದಲ್ಲಿಯೇ ಮೊದಲು ಜಾರಿಗೆ ತಂದಿರುವ ರಾಜ್ಯದ ಪಂಚಭಾಗ್ಯ ಯೋಜನೆಗಳು ಬಡವರನ್ನು, ಕೆಳವರ್ಗದ ಜನರನ್ನು, ಮಹಿಳೆಯರನ್ನು ಸಬಲೀಕರಣಗೊಳಿಸಿ ಮುಖ್ಯ ವಾಹಿನಿಗೆ ತರಲು ಯಶಸ್ವಿಯಾಗುತ್ತಿವೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಶುಕ್ರವಾರ ಜಿಲ್ಲಾಡಳಿತದಿಂದ ಆಯೋಜಿಸಲಾದ 75ನೇ ಗಣರಾಜ್ಯೋತ್ಸವ ದಿನಾಚರಣೆಯಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಗಣರಾಜ್ಯೋತ್ಸವ ಸಂದೇಶ ನೀಡಿದರು.

ಚುನಾವಣಾ ಪೂರ್ವದಲ್ಲಿ ನೀಡಿದ ಭರವಸೆಯಂತೆ ಪಂಚಭಾಗ್ಯ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮೀ, ಶಕ್ತಿಯೋಜನೆ, ಗೃಹಜ್ಯೋತಿ, ಯುವನಿಧಿ ಯೋಜನೆಗಳನ್ನು ಸರ್ಕಾರ ಈಗಾಗಲೇ ಜಾರಿಗೆ ತಂದಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ 4.50 ಲಕ್ಷ, ಗೃಹಜ್ಯೋತಿ ಯೋಜನೆಯಡಿ 3.71 ಲಕ್ಷ, ಗೃಹಲಕ್ಷ್ಮೀ ಯೋಜನೆಯಡಿ 3.70 ಲಕ್ಷ, ಯುವನಿಧಿ ಯೋಜನೆಯಡಿ 3040 ವಿದ್ಯಾರ್ಥಿಗಳು ಹಾಗೂ ಶಕ್ತಿ ಯೋಜನೆಯಡಿ 1.36 ಕೋಟಿ ಮಹಿಳೆಯರು ಈ ಯೋಜನೆಗಳ ಸದುಪಯೋಗ ಪಡೆದುಕೊಂಡಿದ್ದಾರೆ ಎಂದು ತಿಳಿಸಿದರು."ಬಡತನವ ಬುಡಮಟ್ಟ ಕೀಳ ಬನ್ನಿ" ಎಂದು ರಾಷ್ಟ್ರ ಕವಿ ಕುವೆಂಪುರವರು ಕರೆ ಕೊಟ್ಟಂತೆ ಬಡತನ ನಿರ್ಮೂಲನೆಗಾಗಿ, ಯುವಕರಿಗೆ ಉದ್ಯೋಗ ನೀಡುವುದಕ್ಕಾಗಿ ಮತ್ತು ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಗೆ ತರುವುದಕ್ಕಾಗಿ ಈ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. "ನುಡಿದಂತೆ ನಡೆದ ನಮ್ಮ ಸರ್ಕಾರ" ಎಂದು ಹೇಳಲು ಹೆಮ್ಮೆ ಎನಿಸುತ್ತದೆ ಎಂದರು.ಚಿತ್ರದುರ್ಗ ಜಿಲ್ಲೆಯ ಬಹುದಿನಗಳ ಕನಸಾದ ಭದ್ರಾ ಮೇಲ್ದಂಡೆ ಯೋಜನೆ ಸಾಕಾರಗೊಂಡು ಬರದ ನಾಡು ಹಸಿರುನಾಡಾಗುವ ದಿನಗಳು ಕ್ಷಣಗಣನೆಯಲ್ಲಿವೆ. ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಯನ್ನು ಪರಿವೀಕ್ಷಣೆ ಮಾಡಿ ಪೂರ್ಣಗೊಳಿಸಲು ಇರುವ ಕೆಲವೇ ತಾಂತ್ರಿಕ ತೊಡಕುಗಳನ್ನು ಸ್ಥಳದಲ್ಲಿಯೇ ನಿವಾರಿಸಲು ಕೋರಿ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಇವರನ್ನು ಕೋರಲಾಗಿದೆ. ಈ ತಿಂಗಳಾಂತ್ಯದೊಳಗೆ ಭೇಟಿ ನೀಡಿ ಉಪಮುಖ್ಯಮಂತ್ರಿಗಳು ಪರಿವೀಕ್ಷಣೆ ಮಾಡುವರು. 2024 ರ ಅಕ್ಟೋಬರ್ ತಿಂಗಳ ಅಂತ್ಯದೊಳಗೆ ಚಿತ್ರದುರ್ಗದವರೆಗೆ ಭದ್ರಾ ಮೇಲ್ದಂಡೆ ನೀರು ಹರಿಸುವ ಗುರಿ ಹೊಂದಲಾಗಿದೆ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಐತಿಹಾಸಿಕ ಚಿತ್ರದುರ್ಗದ ಕೋಟೆಗೆ ಹೊನಲು ಬೆಳಕು ವ್ಯವಸ್ಥೆ, ಚಂದ್ರವಳ್ಳಿ ತೋಟ ನವೀಕರಣ ಸೇರಿದಂತೆ ಚಿತ್ರದುರ್ಗ ಜಿಲ್ಲೆಯ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಹಾಗೂ ಪ್ರವಾಸಿಗರಿಗೆ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು 29 ಕೋಟಿ ರೂ. ಗಳ ಅಂದಾಜಿನಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಯೋಜನೆಗೆ ಅಂತಿಮ ರೂಪುರೇಷೆಗಳನ್ನು ನೀಡಲಾಗುತ್ತಿದೆ. ಜಿಲ್ಲೆಯ ಬಹುದಿನದ ಕನಸಾದ ಸರ್ಕಾರಿ ಮೆಡಿಕಲ್ ಕಾಲೇಜು 2023–24ನೇ ಸಾಲಿನಿಂದ ಪ್ರಾರಂಭವಾಗಿದೆ. 150 ವಿದ್ಯಾರ್ಥಿಗಳು ಪ್ರಥಮ ವರ್ಷದ ಎಂ.ಬಿ.ಬಿ.ಎಸ್ ಕೋರ್ಸ್ ತರಗತಿಗೆ ಪ್ರವೇಶ ಪಡೆದಿದ್ದಾರೆ.

ಪುಟ 2

ಚಿತ್ರದುರ್ಗನಗರದ ತುರುವನೂರು ರಸ್ತೆಯ ಶ್ರೀ ಅಹೋಬಲ ಟಿವಿಎಸ್ ನಲ್ಲಿ 75 ನೇ ಗಣರಾಜ್ಯೋತ್ಸವದ ಧ್ವಜರೋಹಣವನ್ನು ಎಸ್ ಜೆಎಂ ಕಾಲೇಜಿನ ಇಂಗ್ಲಿಷ್ ಉಪನ್ಯಾಸಕ ವಿಶ್ವನಾಥ್ ಅವರು ನೆರವೇರಿಸಿದರು. ಈ ಸಂದರ್ಭದಲ್ಲಿ ಶ್ರೀಅಹೋಬಲ ಟಿವಿಎಸ್ ಮಾಲೀಕ ಪಿ.ವಿ.ಅರುಣ್ ಕುಮಾರ್, ಮುಖ್ಯ ಅತಿಥಿಗಳಾಗಿ ಮಂಜುಳ, ಮಂಜುನಾಥ ಸ್ವಾಮಿ, ಸಾಧಿಕ್, ತಿಪ್ಪೇಸ್ವಾಮಿ, ಮೋಹನ್ ಮತ್ತು ಶ್ರೀಅಹೋಬಲ ಟಿವಿಎಸ್ ಸಿಬ್ಬಂದಿ ವರ್ಗ ಹಾಜರಿದ್ದರು.

ಚಳ್ಳಕೆರೆ ತಾಲೂಕಿನ ದೊಡ್ಡಚೆಲ್ಲೂರು ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಯಲ್ಲಿ ಸಂಭ್ರಮದ ಗಣರಾಜ್ಯೋತ್ಸವ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯ ಹನುಮಂತರಾಯಪ್ಪ ಮತ್ತು ಶಿಕ್ಷಕ ವರ್ಗ ಹಾಜರಿದ್ದರು.

ಪ್ರಮುಖ ಸುದ್ದಿ

ಟಿ.ರಘುಮೂರ್ತಿ ಮತ್ತು ಬಿ.ಜಿ.ಗೋವಿಂದಪ್ಪಗೆ ಒಲಿದ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ

ರಘುಮೂರ್ತಿಗೆ 2ನೇ ಬಾರಿಗೆ ಒಲಿದ ನಿಗಮಸ್ಥಾನ

» ಚಿತ್ರದುರ್ಗ/ ಚಳ್ಳಕೆರೆ

ಕಳೆದ ಹಲವು ತಿಂಗಳುಗಳಿಂದ ರಾಜ್ಯದಲ್ಲಿ ನಡೆಯುತ್ತಿದ್ದನಿಗಮಮಂಡಳಿಊಹಾಪೋಹಗಳಿಗೆ ಕಾಂಗ್ರೆಸ್ ತೆರೆ ಎಳೆದಿದೆ.ರಾಜ್ಯ ಸರ್ಕಾರ ವಿವಿಧ ನಿಗಮ ಮಂಡಳಿಗಳಿಗೆ ಅಧ್ಯಕ್ಷರನ್ನು ನೇಮಕ ಮಾಡಿದ್ದು ಕೋಟೆನಾಡು ಚಿತ್ರದುರ್ಗ ಜಿಲ್ಲೆಯ ಇಬ್ಬರು ಶಾಸಕರಿಗೆ ಮಣೆ ಹಾಕಿದ್ದಾರೆ.

ಚಿತ್ರದುರ್ಗ ಜಿಲ್ಲೆಯ ಹಿರಿಯ ಶಾಸಕ ಹೊಸದುರ್ಗ ವಿಧಾನಸಭಾ ಕ್ಷೇತ್ರದ ಬಿ.ಜಿ.ಗೋವಿಂದಪ್ಪ ಹಾಗೂ ಚಳ್ಳಕೆರೆ ಕ್ಷೇತ್ರದಲ್ಲಿ ಹ್ಯಾಟ್ರಿಕ್ ಗೆಲುವು ಸಾಧಿಸುವ ಮೂಲಕ ಇತಿಹಾಸ ನಿರ್ಮಿಸಿದ್ದ ಶಾಸಕ ಟಿ.ರಘುಮೂರ್ತಿ ಅವರಿಗೆ ನಿಗಮ ಮಂಡಳಿಯಲ್ಲಿ ಸ್ಥಾನ ನೀಡಲಾಗಿದೆ.

ಶಾಸಕ ಬಿ.ಜಿ.ಗೋವಿಂದಪ್ಪ ಅವರಿಗೆ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಜವಾಬ್ದಾರಿ ನೀಡಲಾಗಿದೆ. ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅವರಿಗೆ ಕರ್ನಾಟಕ ರಾಜ್ಯ ಕೈಗಾರಿಕಾ ಮಂಡಳಿಗಳ ನಿಗಮದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.ಇಬ್ಬರೂ ಶಾಸಕರು ಸಹ ಸಚಿವ ಸ್ಥಾನಮಾನ ಪಡೆಯಲು ಯತ್ನ ಸಹ ನಡೆಸಿದ್ದರು. ಎರಡೂವರೆ ವರ್ಷದ ನಂತರ ಸಂಪುಟ ಸೇರುವ ನಿರೀಕ್ಷೆಯಲ್ಲಿದ್ದರು. ಆದರೆ ಸರ್ಕಾರದಲ್ಲಿ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡುವ ಮೂಲಕ ಸಂಪುಟ ದರ್ಜೆಯ ಸ್ಥಾನಮಾನ ದೊರೆಯಲಿದೆ. ಸಂಪುಟ ಸಚಿವರಿಗೆ ಸಿಗುವ ಎಲ್ಲ ಸೌಲಭ್ಯಗಳನ್ನು ಒದಗಿಸಲು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ನಿಗಮ ಮಂಡಳಿಗೆ ನೇಮಕ ಮಾಡಿರುವ ಆದೇಶದಲ್ಲಿ ಇಂದಿನಿಂದ ಮುಂದಿನ ಎರಡು ವರ್ಷಗಳಿಗೆ ಅಧಿಕಾರ ಅವಧಿ ಎಂದು ನಿಗಧಿ ಮಾಡಲಾಗಿದೆ.

ಪುಟ 3

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5410

ಬೆಳ್ಳಿ ಬೆಲೆ	
ಕೆಜಿ	66000

ಫಾಸ್ಟ್ ನ್ಯೂಸ್

ಅಗ್ನಿವೀರ್ ಆಯ್ಕೆ ಪರೀಕ್ಷೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಭಾರತೀಯ ವಾಯು ಪಡೆಯಿಂದ ಅಗ್ನಿಪಥ್ ಯೋಜನೆಯಡಿ ವಾಯುಸೇವೆಯ ಅಗ್ನಿವೀರ್ ಆಯ್ಕೆ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. 10+2 ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ, 02 ಜನವರಿ 2004 ಮತ್ತು 02 ಜುಲೈ 2007ರ ಒಳಗೆ ಜನಿಸಿರುವ, 21 ವರ್ಷ ವಯೋಮಿತಿ ಒಳಗಿರುವ ಅವಿವಾಹಿತ ಪುರುಷ ಮತ್ತು ಮಹಿಳೆ ಅಭ್ಯರ್ಥಿಗಳು ಆನ್ ಮೂಲಕ ಅರ್ಜಿ ಸಲ್ಲಿಸಬಹುದು. ಫೆಬ್ರವರಿ 06 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ. ಮಾರ್ಚ್ 17 ರಂದು ಆನ್‌ಲೈನ್ ಮೂಲಕವೇ ಪರೀಕ್ಷೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ http://careerindianairforce.cdac.in ಮತ್ತು http://agnipathvayu.cdac.in, ದೂರವಾಣಿ ಸಂಖ್ಯೆ 9945587060,7022459064 ಸಂಪರ್ಕಿಸಬಹುದ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ಚಿತ್ರದುರ್ಗ

ಇದೇ ಜನವರಿ 29 ಮತ್ತು 30 ರಂದು ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಖುದ್ದಾಗಿ ಲೋಕಾಯುಕ್ತ ಅಧಿಕಾರಿಗಳು ಭೇಟಿ ನೀಡಿ ಸಾರ್ವಜನಿಕರಿಂದ ದೂರು ಹಾಗೂ ಅವಹಾಲುಗಳನ್ನು ಸ್ವೀಕರಿಸುವರು. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡಲು ಅಲ್ಲಿನ ಅಧಿಕಾರಿ, ಸಿಬ್ಬಂದಿಗಳು ಲಂಚದ ಹಣಕ್ಕಾಗಿ ಬೇಡಿಕೆಯಿಟ್ಟಲ್ಲಿ, ಸರ್ಕಾರವು ಸಾರ್ವಜನಿಕರಿಗಾಗಿ ರೂಪಿಸಲಾಗಿರುವ ಅನೇಕ ಯೋಜನೆಗಳನ್ನು ಸರ್ಕಾರಿ ಅಧಿಕಾರಿಗಳು ಅನುಷ್ಠಾನಗೊಳಿಸದೇ ಇರುವುದು ಮತ್ತು ಅಂತಹ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸಲು ಅನಾವಶ್ಯಕ ವಿಳಂಬ, ಕರ್ತವ್ಯದಲ್ಲಿ ನಿರ್ಲಕ್ಷತನ, ತಾರತಮ್ಯ ತೋರುವುದು, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸರಿಯಾದ ರೀತಿಯಲ್ಲಿ ತಲುಪಿಸದೇ ಇರುವುದು ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗಧಿತ ನಮೂನೆಯಲ್ಲಿ ಸಲ್ಲಿಸಬಹುದಾಗಿದೆ.

ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕು ಭೇಟಿ ವಿವರ: ಜ.29ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಹೊಸದುರ್ಗ ಪುರಸಭೆಯಲ್ಲಿ ಹಾಗೂ ಅಂದು ಮಧ್ಯಾಹ್ನ 3 ರಿಂದ ಸಂಜೆ 5.30 ರವರೆಗೆ ಹೊಳಲ್ಕೆರೆ ಪುರಸಭೆಯಲ್ಲಿ ಪೊಲೀಸ್ ನಿರೀಕ್ಷಕರು–2 ಹಾಜರಿದ್ದು, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಜ..29ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಮೊಳಕಾಲ್ಮೂರು ಪಟ್ಟಣ ಪಂಚಾಯಿತಿ/ಪುರಸಭೆಯಲ್ಲಿ ಪೊಲೀಸ್ ನಿರೀಕ್ಷಕರು–1 ಹಾಗೂ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರವರೆಗೆ ಚಳ್ಳಕೆರೆ ನಗರಸಭೆಯಲ್ಲಿ ಪೊಲೀಸ್ ಉಪಾಧೀಕ್ಷಕು ಹಾಜರಿದ್ದು, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಜ.30ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಹಿರಿಯೂರು ನಗರಸಭೆಯಲ್ಲಿ ಹಾಗೂ ಅಂದು ಮಧ್ಯಾಹ್ನ 3 ರಿಂದ ಸಂಜೆ 5.30 ರವರೆಗೆ ಚಿತ್ರದುರ್ಗ ನಗರಸಭೆಯಲ್ಲಿ ಪೊಲೀಸ್ ನಿರೀಕ್ಷಕರು–3 ಹಾಜರಿದ್ದು, ಸಾರ್ವಜನಿಕರಿಂದ ದೂರು ಅಹವಾಲು ಸ್ವೀಕರಿಸುವರು ಎಂದು ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ತಿಳಿಸಿದ್ದಾರೆ.

ಮಹಾರಾಣಿ ಕಾಲೇಜಿನಲ್ಲಿ ಸಂಭ್ರಮದ ಗಣರಾಜ್ಯೋತ್ಸವ

» ಚಿತ್ರದುರ್ಗ

ಜಿಲ್ಲಾ ಮದಕರಿ ನಾಯಕ ವಿದ್ಯಾ ಸಂಸ್ಥೆ (ರಿ) ಚಿತ್ರದುರ್ಗ, ಈ ಸಂಸ್ಥೆಯ ಅಡಿಯಲ್ಲಿ ಬರುವ ಎಲ್ಲಾ ಶಾಲಾ ಕಾಲೇಜುಗಳು ಸೇರಿ 75ನೇ ಗಣರಾಜ್ಯೋತ್ಸವವನ್ನು ತುಂಬಾ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಈ ಸುಂದರ ಸಂಭ್ರಮದ ಕಾರ್ಯಕ್ರಮವನ್ನು ಜಿಲ್ಲಾ ಮದಕರಿ ನಾಯಕ ವಿದ್ಯಾ ಸಂಸ್ಥೆಯ ಅಧ್ಯಕ್ಷ ಎಸ್ ಸಂದೀಪ್ ಅವರು ಧ್ವಜಾರೋಹಣ ಕಾರ್ಯಕ್ರಮವನ್ನು ನೆರವೇರಿಸಿದರು.

ಗ್ರಾಮೀಣ ಮಹಿಳೆಯರ ಮಕ್ಕಳ ಆರೈಕೆಗಾಗಿ ಕೂಸಿನ ಮನೆ

ಪಂಡರಹಳ್ಳಿಯಲ್ಲಿ ಶಾಸಕ ವೀರೇಂದ್ರ ಉದ್ಘಾಟನೆ

» ಚಿತ್ರದುರ್ಗ

ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಗ್ರಾಮೀಣ ಪ್ರದೇಶದ ಮಹಿಳೆಯರ ಮೂರು ವರ್ಷದೊಳಗಿನ ಮಕ್ಕಳ ಆರೈಕೆಗಾಗಿ ತಾಲ್ಲೂಕಿನ ಗೊಡಬನಹಾಳ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಪಂಡರಹಳ್ಳಿ ಗ್ರಾಮದಲ್ಲಿ ಸಿದ್ಧಗೊಳಿಸಲಾದ "ಕೂಸಿನ ಮನೆ" ಯನ್ನು ಶಾಸಕ ವೀರೇಂದ್ರ ಪಪ್ಪಿ ಅವರು ಶುಕ್ರವಾರ ಉದ್ಘಾಟಿಸಿದರು.

ಶುಕ್ರವಾರದಂದು ಗಣರಾಜ್ಯೋತ್ಸವದ ಸುಸಂದರ್ಭದಲ್ಲಿ ಗೊಡಬನಹಾಳ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಪಂಡರಹಳ್ಳಿ ಗ್ರಾಮದಲ್ಲಿ ಸಿದ್ಧಗೊಂಡಿದ್ದ ಕೂಸಿನ ಮನೆಯನ್ನು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಉದ್ಘಾಟಿಸಿದರು. ಅಲ್ಲದೆ, ಕೂಸಿನ ಮನೆಗೆ ಸೇರಿರುವ/ನೊಂದಾಯಿತ 02 ವರ್ಷದ ಮಗುವಿಗೆ ಪೌಷ್ಟಿಕ ಹಾಲು ನೀಡುವ ಮೂಲಕ ಯೋಜನೆಗೆ ಚಾಲನೆ ನೀಡಿದರು. ಸರ್ಕಾರವು ಬಹುತೇಕ ಮಹಿಳೆಯರ ಅದರಲ್ಲೂ ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕೆ ಒತ್ತುಕೊಟ್ಟು ಯೋಜನೆಗಳನ್ನು ರೂಪಿಸುತ್ತಿದೆ, 06 ವರ್ಷದೊಳಗಿನ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಿ ಆರೈಕೆ ಮಾಡಿದಲ್ಲಿ, ಸದೃಢ ಸಮಾಜ ನಿರ್ಮಾಣ ಮಾಡಬಹುದು ಎನ್ನುವುದೆ ಸರ್ಕಾರದ ಆಶಯವಾಗಿದೆ. ಗ್ರಾಮೀಣ ಭಾಗದ ಮಹಿಳೆಯರಿಗೆ ನರೇಗಾದಡಿ ಕೆಲಸ ಕೊಟ್ಟು ಕುಟುಂಬದ ಆರ್ಥಿಕತೆ ಸರಿದೂಗಿಸುವ ಮತ್ತು ಕೆಲಸದ ಸಮಯದಲ್ಲಿ ಅವರ 3 ವರ್ಷದ ಒಳಗಿನ ಮಕ್ಕಳ ಆರೈಕೆಗೂ ಸನ್ನದ್ಧವಾಗಿದೆ "ಕೂಸಿನ ಮನೆ" ಯೋಜನೆ ಎಂದರು. ಸಂಬಂಧಿಸಿದ ಆರೈಕೆದಾರರು ಮತ್ತು ಅಧಿಕಾರಿಗಳಿಗೆ ಸಣ್ಣ ಮಕ್ಕಳ ಆರೈಕೆ ದೊಡ್ಡ ಜವಾಬ್ದಾರಿ ಆಗಿದ್ದು ಎಚ್ಚರ ವಹಿಸುವಂತೆ ಸೂಚಿಸಿದರು.

ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ ಅವರು ಮಾಹಿತಿ ನೀಡಿ, ರಾಜ್ಯ ಸರ್ಕಾರ ಮಹಿಳಾ ಸಬಲೀಕರಣಕ್ಕೆ ಒತ್ತುಕೊಡುವ ಹಲವು ಯೋಜನೆಗಳಲ್ಲಿ *"ಕೂಸಿನ ಮನೆ"* ಯೂ ಪ್ರಮುಖಗಳಲ್ಲಿ ಒಂದಾಗಿದೆ, ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಗ್ರಾಮೀಣ ಭಾಗದ ಮಹಿಳೆಯರ ಮೂರು ವರ್ಷದೊಳಗಿನ ಮಕ್ಕಳ ಆರೈಕೆಗಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಗಳಲ್ಲಿ ಕೂಸಿನ ಮನೆ ಅನುಷ್ಠಾನಗೊಳಿಸಲಾಗುತ್ತಿದೆ, ಸದ್ಯ ತಾಲ್ಲೂಕಿನಲ್ಲಿ 26 ಕೂಸಿನ ಮನೆಗಳ ನಿರ್ಮಾಣದ ಗುರಿ ಇದ್ದು, ಭರದಿಂದ ಸಿದ್ಧಗೊಳ್ಳುತ್ತಿವೆ. ಇಂತಹ ಕೂಸಿನ ಮನೆಗಳ ನಿರ್ವಹಿಸಲು ರೊಟೇಷನ್ ಆಧಾರದ ಮೇಲೆ 8 ಆರೈಕೆದಾರರನ್ನು ಗುರುತಿಸಿ ಸದ್ಯ 5 ಜನರಿಗೆ 7 ದಿನ ಮಕ್ಕಳ ನಿರ್ವಹಣೆ ಬಗ್ಗೆ ಪಂಚಾಯತ್ ರಾಜ್ ಮತ್ತು ಎಸ್ ಐ ಆರ್ ಡಿ ಸಂಸ್ಥೆಯ ನುರಿತವರಿಂದ ವೈಜ್ಞಾನಿಕವಾಗಿ ತರಬೇತಿ ನೀಡಲಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಗಳಲ್ಲಿ ಮೂರು ವರ್ಷದೊಳಗಿನ ಮಕ್ಕಳ ಸಮೀಕ್ಷೆ ಮತ್ತು ಪ್ರಚಾರ ಕಾರ್ಯ ಮಾಡಲಾಗುತ್ತಿದೆ. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷೆ ಮಧು ರಮೇಶ್ ಮತ್ತು ಸರ್ವ ಸದಸ್ಯರು, ಸಹಾಯಕ ನಿರ್ದೇಶಕ ಎರ್ರಿಸ್ವಾಮಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುಳ ಮತ್ತು ಸಿಬ್ಬಂದಿ, ಐ ಇ ಸಿ ಸತ್ಯನಾರಾಯಣ, ಪಿಡಿಒ ಅಧಿಕಾರಿಗಳಾದ ಭವಾನಿ, ಗ್ರಾ.ಪಂ ಸಿಬ್ಬಂದಿ, ಅಂಗವಾಡಿ ಕಾರ್ಯಕರ್ತರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಪಂಚಭಾಗ್ಯ ಜಾರಿಯಿಂದ ಬಡವರು, ಮಹಿಳೆಯರು ಮುಖ್ಯ ವಾಹಿನಿಗೆ: ಉಸ್ತುವಾರಿ ಸಚಿವ ಡಿ.ಸುಧಾಕರ್

» ಮೊದಲ ಪುಟದಿಂದ

ಸರ್ಕಾರಿ ಮೆಡಿಕಲ್ ಕಾಲೇಜ್ ಆಸ್ಪತ್ರೆ ನಿರ್ಮಾಣ ಕಾರ್ಯ ಭರದಿಂದ ಸಾಗಿದ್ದು, ಮುಂದಿನ ದಿನಗಳಲ್ಲಿ ಮೆಡಿಕಲ್ ಕಾಲೇಜು ನಿರ್ಮಾಣ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಕ್ರಮವಹಿಸಲಾಗುವುದು ಎಂದರು.

ಜಿಲ್ಲೆಯ ಆರು ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಸರ್ಕಾರ ಈಗಾಗಲೆ ಘೋಷಣೆ ಮಾಡಿದ್ದು, ಬರ ನಿರ್ವಹಣೆಗೆ ಸರ್ಕಾರದಿಂದ ರೂ.9 ಕೋಟಿಗಳ ಹಣ ಬಿಡುಗಡೆಯಾಗಿದೆ. ಈ ವರ್ಷದಲ್ಲಿ ವಾಡಿಕೆಗಿಂತ ಕಡಿಮೆ ಪ್ರಮಾಣದಲ್ಲಿ ಮಳೆಯಾಗಿರುವುದರಿಂದ ಅಂತರ್ಜಲ ಮಟ್ಟ ಕುಸಿದಿದೆ. ಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಹುದಾದ ಗ್ರಾಮಗಳನ್ನು ಈಗಾಗಲೇ ಗುರುತಿಸಲಾಗಿದ್ದು, ಬೋರ್‌ವೆಲ್‌ಗಳನ್ನು ಕೊರೆಯಲು ಕ್ರಿಯಾ ಯೋಜನೆ ರೂಪಿಸಲಾಗಿದೆ. ಹಾಗೂ ದನಕರುಗಳಿಗೆ ಮೇವು ವಿತರಣೆಗೆ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿರುವ ಎಲ್ಲಾ ಹೋಬಳಿಗಳಲ್ಲಿ ಗೋಶಾಲೆ ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಈಗಾಗಲೇ ಚಳ್ಳಕೆರೆ ತಾಲ್ಲೂಕಿನ ಚೌಳೂರು ಗ್ರಾಮದಲ್ಲಿ ಗೋಶಾಲೆ ಪ್ರಾರಂಭಿಸಲಾಗಿದೆ. ಮುಂದಿನ ದಿನಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಗೋಶಾಲೆ ಪ್ರಾರಂಭಿಸಲಾಗುವುದು.

ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಸರ್ಕಾರ ಕಂಕಣಬದ್ಧವಾಗಿದೆ. ಈ ನಿಟ್ಟಿನಲ್ಲಿ ಮೊಳಕಾಲ್ಮುರು ತಾಲ್ಲೂಕಿನಲ್ಲಿ ಬಟ್ಟೆ ಉದ್ಯಮದ ಪಾರ್ಕ್ ಮತ್ತು ಚಿತ್ರದುರ್ಗ ತಾಲ್ಲೂಕಿನಲ್ಲಿ ವಿವಿಧ ಕೈಗಾರಿಕಾ ಘಟಕಗಳ ಪಾರ್ಕ್‌ಗಳನ್ನು ಸ್ಥಾಪಿಸಲು ಯೋಜನೆಗಳನ್ನು ರೂಪಿಸಲಾಗುತ್ತಿದೆ. ಚಿತ್ರದುರ್ಗ ಜಿಲ್ಲೆ ಮತ್ತು ನಗರವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯಲು ಎಲ್ಲರೂ ಸಹಕಾರ ನೀಡಬೇಕು ಎಂದು ಸಚಿವ ಡಿ.ಸುಧಾಕರ್ ಕೋರಿದರು.

ಕೂಸಿನ ಮನೆ ಅನಾವರಣ: ನರೇಗಾದಡಿ ಕೂಲಿ ಕಾರ್ಮಿಕರಾಗಿ ದುಡಿಯುವ ಹೆಣ್ಣುಮಕ್ಕಳ 3 ವರ್ಷದೊಳಗಿನ ಮಕ್ಕಳ ಆರೈಕೆಗಾಗಿ ಜಿಲ್ಲೆಯಾದ್ಯಂತ ಜಿಲ್ಲಾ ಪಂಚಾಯಿತಿ ವತಿಯಿಂದ ನಿರ್ಮಿಸಲಾಗುತ್ತಿರುವ "ಕೂಸಿನ ಮನೆ" ಕಾರ್ಯಕ್ರಮಕ್ಕೆ ಗಣರಾಜ್ಯೋತ್ಸವ ಸಂದರ್ಭದಲ್ಲಿ ಸಚಿವ ಡಿ.ಸುಧಾಕರ್ ಅನಾವರಣ ಮಾಡಿದರು.

ಜಿಲ್ಲೆಯಲ್ಲಿ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿ, ಜನರಿಗೆ ಉತ್ತಮ ಆರೋಗ್ಯ ಸೇವೆ ನೀಡಿದ ಜಿಲ್ಲೆಯ ವಿವಿಧ ಐದು ಆಸ್ಪತ್ರೆಗಳಿಗೆ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಆಕರ್ಷಕ ಪಥ ಸಂಚಲನ: ಗಣರಾಜ್ಯೋತ್ಸವ ಅಂಗವಾಗಿ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಈ ಬಾರಿ ಜಿಲ್ಲಾ ಸಶಸ್ತ್ರ ಪೊಲೀಸ್ ಪಡೆಯ ಆರ್‌ಪಿಐ ಹೆಚ್.ಡಿ.ರುದ್ರೇಶ್ ಪರೇಡ್ ಕಮಾಂಡರ್ ಅವರ ಮುಂದಾಳತ್ವದಲ್ಲಿ ಒಟ್ಟು 20 ತಂಡಗಳಿಂದ ಆಕರ್ಷಕ ಪಥಸಂಚಲನ ಜರುಗಿತು.ಆರ್‌ಎಸ್‌ಐ ಶಿವರಾಜ್ ನೇತೃತ್ವದಲ್ಲಿ ಸಶಸ್ತ್ರ ಮೀಸಲು ಪಡೆ ತುಕಡಿ, ಪಿಎಸ್‌ಐ ರಘು ನೇತೃತ್ವದಲ್ಲಿ ನಾಗರೀಕ ಪೊಲೀಸ್ ತುಕಡಿ, ಪ್ರಹ್ಲಾದ್ ನೇತೃತ್ವದಲ್ಲಿ ಗೃಹ ರಕ್ಷಕ ದಳ, ವಸಂತ ಕುಮಾರ್ ನೇತೃತ್ವದಲ್ಲಿ ಅರಣ್ಯ ಇಲಾಖೆ ತುಕಡಿ, ಸರ್ಕಾರಿ ವಿಜ್ಞಾನ ಕಾಲೇಜು ಎನ್‌ಸಿಸಿ, ಸಂತ ಜೋಸೆಫರ ಕಾನ್ವೆಂಟ್ ಪ್ರೌಢಶಾಲೆಯ ಎನ್‌ಸಿಸಿ ಮತ್ತು ಗೈಡ್ಸ್ ತಂಡ, ವಿದ್ಯಾವಿಕಾಸ ಆಂಗ್ಲ ಪ್ರೌಢಶಾಲೆ, ಎಸ್‌ಜೆಎಂಆರ್ ಸಿಬಿಎಸ್‌ಸಿ ಬಾಲಕಿಯರು, ಬಾಲಕರು ಹಾಗೂ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗ, ವಿದ್ಯಾವಿಕಾಸ ಆಂಗ್ಲ ಪ್ರೌಢಶಾಲೆ, ಗೂಳಯ್ಯನಹಟ್ಟಿ ಮೊರಾರ್ಜಿ ದೇಸಾಯಿ ದೇಸಾಯಿ ಬಾಲಕಿಯರು ಮತ್ತು ಬಾಲಕರ ತಂಡ, ಪಾರ್ಶ್ವನಾಥ, ವಿದ್ಯಾರ್ಥಿಗಳು ಆಕರ್ಷಕ ಪಥ ಸಂಚಲನ ನಡೆಸಿ ಗಮನ ಸೆಳೆದರು.

ಪಥ ಸಂಚಲನಕ್ಕೆ ಬ್ಯಾಂಡ್ ಮಾಸ್ಟರ್ ಸಿ.ಪಾಂಡುರಂಗ ನೇತೃತ್ವದ ಪೊಲೀಸ್ ಬ್ಯಾಂಡ್ ಹಾಗೂ ಅಜಯ್ ನೇತೃತ್ವದ ಸಂತ ಜೋಸೆಫರ ಕಾನ್ವೆಂಟ್ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಬ್ಯಾಂಡ್ ವಾದ್ಯವೃಂದ ಸಾಥ್ ನೀಡಿತು.

ಮನಸೂರೆಗೊಂಡ ಸಾಂಸ್ಕೃತಿಕ ಕಾರ್ಯಕ್ರಮಗಳು: ಗಣರಾಜ್ಯೋತ್ಸವದ ಅಂಗವಾಗಿ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ವಿವಿಧ ಶಾಲೆ, ಕಾಲೇಜುಗಳ ವಿದ್ಯಾರ್ಥಿಗಳಿಂದ ಏರ್ಪಡಿಸಲಾದ ಸಾಂಸ್ಕೃತಿಕ ಕಾರ್ಯಕ್ರಮಗಳು ನಮ್ಮ ದೇಶದ ಸಂಸ್ಕೃತಿ, ವಿವಿಧತೆಯಲ್ಲಿ ಏಕತೆಯೊಂದಿಗಿನ ಸಾಂಸ್ಕೃತಿಕ ಸಮ್ಮೀಲನಕ್ಕೆ ಸಾಕ್ಷಿಯಾದವು.ಚಿತ್ರದುರ್ಗ ನಗರದ ಡಾನ್‌ಬಾಸ್ಕೋ ಶಾಲೆಯ 500 ವಿದ್ಯಾರ್ಥಿಗಳು ಹಾಗೂ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆ ಹಾಗೂ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನ 200 ವಿದ್ಯಾರ್ಥಿಗಳು ಪ್ರಸ್ತುತ ಪಡಿಸಿದ ದೇಶಭಕ್ತಿ ಗೀತೆಗಳ ಆಕರ್ಷಕ ನೃತ್ಯರೂಪಕ ನೋಡುಗರ ಮನಸೂರೆಗೊಂಡಿತು. ಕಾರ್ಯಕ್ರಮದಲ್ಲಿ ಶಾಸಕ ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಪ್ರಭಾರ ಉಪವಿಭಾಗಾಧಿಕಾರಿ ವಿವೇಕ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಜ. 28 ರಂದು ಚಿತ್ರದುರ್ಗದಲ್ಲಿ ರಾಜ್ಯ ಮಟ್ಟದ ಶೋಷಿತರ ಜಾಗೃತಿ ಸಮಾವೇಶ

ವಾಹನಗಳ ಸಂಚಾರ ಮಾರ್ಗ ಬದಲಾವಣೆ

» ಚಿತ್ರದುರ್ಗ

ಇದೇ ಜ. 28 ರಂದು ಚಿತ್ರದುರ್ಗ ನಗರದ ಹೊರವಲಯದಲ್ಲಿರುವ ಶ್ರೀ ಬಸವ ಮೂರ್ತಿ ಮಾದಾರ ಚನ್ನಯ್ಯ ಪೀಠದ ಬಳಿಯ ಖಾಲಿ ಜಾಗದಲ್ಲಿ ರಾಜ್ಯ ಮಟ್ಟದ ಶೋಷಿತರ ಜಾಗೃತಿ ಸಮಾವೇಶ ನಡೆಯಲಿದ್ದು, ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಸೇರಿದಂತೆ ವಿವಿಧ ಸಚಿವರುಗಳು ಪಾಲ್ಗೊಳ್ಳುವರು. ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವ ಉದ್ದೇಶದಿಂದ ಅಂದು ಬೆ. 06 ರಿಂದ ಸಂಜೆ 06 ಗಂಟೆಯವರೆಗೆ ಚಿತ್ರದುರ್ಗ ನಗರಕ್ಕೆ ವಿವಿಧೆಡೆಯಿಂದ ಆಗಮಿಸುವ ಭಾರಿ ಹಾಗೂ ಲಘು ವಾಹನಗಳಸಂಚಾರಮಾರ್ಗದಲ್ಲಿ ಬದಲಾವಣೆಗೊಳಿಸಿ ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಆದೇಶ ಹೊರಡಿಸಿದ್ದಾರೆ.

ಸಮಾವೇಶದಲ್ಲಿ ಪಾಲ್ಗೊಳ್ಳಲು ಜ. 28 ರಂದು ರಾಜ್ಯದ ವಿವಿಧ ಜಿಲ್ಲೆಗಳಿಂದ ಲಕ್ಷಾಂತರ ಜನರು ವಾಹನಗಳಲ್ಲಿ ಆಗಮಿಸುವ ನಿರೀಕ್ಷೆಯಿದ್ದು, ಸಂಚಾರ ವ್ಯತ್ಯಯ ಉಂಟಾಗುವ ಸಾಧ್ಯತೆಗಳಿರುವುದರಿಂದ, ಸಂಚಾರ ದಟ್ಟಣೆ ತಡೆಯುವ ನಿಟ್ಟಿನಲ್ಲಿ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಸಂಬಂಧ ಕೆಲವು ಸಂಚಾರ ಮಾರ್ಗದ ಬದಲಾವಣೆ ಮಾಡಲಾಗಿದೆ.

ದಾವಣಗೆರೆ ಮಾರ್ಗದಿಂದ ಬರುವ ವಾಹನಗಳು ಹೊಸ ಎನ್.ಹೆಚ್.–48 (ಬೈಪಾಸ್) ರಸ್ತೆಯ ಮೂಲಕ ರಾಷ್ಟ್ರೀಯ ಹೆದ್ದಾರಿ –13 ರ ಮೂಲಕ ಮುಂದುವರೆದು ಮದಕರಿಪುರ ಗ್ರಾಮದ ಬಳಿಯ ಸರ್ವಿಸ್ ರಸ್ತೆಯ ಮೂಲಕ ಇಳಿದು ಚಳ್ಳಕೆರೆ ರಸ್ತೆಯ ಮೂಲಕ ನಗರಕ್ಕೆ ಪ್ರವೇಶಿಸಬೇಕು.

ಹ

ಸಂವಿಧಾನ ಸ್ತಬ್ಧಚಿತ್ರ ವಾಹನಕ್ಕೆ ಸಚಿವರ ಚಾಲನೆ

» ಚಿತ್ರದುರ್ಗ

ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಶುಕ್ರವಾರ ಸಂವಿಧಾನ ಜಾಗೃತಿ ಜಾಥಾದ ಸ್ತಬ್ಧಚಿತ್ರ ವಾಹನಕ್ಕೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಭಾರತದ ಸಂವಿಧಾನ ಅಂಗೀಕರಿಸಿಕೊಂಡು 75 ವರ್ಷಗಳಾದ ಹಿನ್ನಲೆಯಲ್ಲಿ ಸರ್ಕಾರದ ವತಿಯಿಂದ "ಸಂವಿಧಾನ ಜಾಗೃತಿ ಜಾಥಾ"ಎಂಬ ಶೀರ್ಷಿಕೆಯಡಿಯಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ, ನಗರ ಸ್ಥಳೀಯ ಸಂಸ್ಥೆಗಳಿಗೆ ಸಂವಿಧಾನ ಜಾಗೃತಿ ಸ್ತಬ್ಧಚಿತ್ರ ಮೆರವಣಿಗೆ ಸಂಚರಿಸಲಿದೆ.

ಫೆಬ್ರವರಿ 25ರಂದು ಬೆಂಗಳೂರು ಅರಮನೆ ಮೈದಾನದಲ್ಲಿ ರಾಷ್ಟ್ರಮಟ್ಟದ ಬೃಹತ್ ಸಮಾವೇಶ ಕಾರ್ಯಕ್ರಮ ಆಯೋಜಿಸಲಾಗುವುದು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಸಂವಿಧಾನ ಜಾಗೃತಿ ಸ್ತಬ್ಧಚಿತ್ರ ಭಾಗವಹಿಸುವುದು. ಇದಕ್ಕೂ ಮುನ್ನಾ ಜನವರಿ 26 ರಿಂದ ಫೆಬ್ರವರಿ 23 ರವರೆಗೆ ಜಿಲ್ಲೆಯ ಎಲ್ಲಾ 189 ಗ್ರಾಮ ಪಂಚಾಯಿತಿ,

07 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಂಚರಿಸಿ, ಸಂವಿಧಾನದ ಕುರಿತು ಜಾಗೃತಿ ಮೂಡಿಸಲಿದೆ. ಈ ಜಾಗೃತಿ ಜಾಥಾದಲ್ಲಿ ಜನಪ್ರತಿನಿಧಿಗಳು, ವಿವಿಧ ಸಂಘ–ಸಂಸ್ಥೆಗಳು, ಮಹಿಳಾ ಸ್ವ–ಸಹಾಯ ಸಂಘಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಸಚಿವ ಡಿ.ಸುಧಾಕರ್ ಕೋರಿದರು.

ಆಕರ್ಷಕ ಸ್ತಬ್ಧಚಿತ್ರ: ಜಿಲ್ಲೆಯ ಐತಿಹಾಸಿಕ ಮಹತ್ವ ಹಾಗೂ ಸರ್ಕಾರದ ಸಾಧನೆಗಳನ್ನು ಬಿಂಬಿಸುವ ನಿಟ್ಟಿನಲ್ಲಿ ಸಂವಿಧಾನ ಜಾಗೃತಿ ಸ್ಥಬ್ಧಚಿತ್ರವನ್ನು ಆಕರ್ಷಕವಾಗಿ ನಿರ್ಮಿಸಲಾಗಿದೆ. ಸ್ತಬ್ಧಚಿತ್ರ ಜಾಥಾ ವಾಹನದ ಮುಂಭಾಗದಲ್ಲಿ ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಯನ್ನು ನಿರ್ಮಿಸಲಾಗಿದ್ದು, ವಾಹನದಲ್ಲಿ ಬುದ್ಧ, ಬಸವಣ್ಣನವರು ಹಾಗೂ ವೀರ ಮದಕರಿ ನಾಯಕರ ಭಾವಚಿತ್ರವನ್ನು ಅನಾವರಣಗೊಳಿಸಲಾಗಿದೆ. ವಾಹನದ ಮಧ್ಯಭಾಗದಲ್ಲಿ ವೀರವನಿತೆ ಒನಕೆ ಓಬವ್ವ ಪುತ್ಥಳಿ ನಿರ್ಮಿಸಲಾಗಿದ್ದು, ಇದರ ಅಕ್ಕಪಕ್ಕದಲ್ಲಿ ಸರ್ಕಾರಿ ಯೋಜನೆಗಳ ಸೌಲಭ್ಯ ಪಡೆದಿರುವ ಫಲಾನುಭವಿಗಳನ್ನು ಬಿಂಬಿಸುವ ಪ್ರತಿಕೃತಿ ರಚಿಸಲಾಗಿದೆ. ವಾಹನದಲ್ಲಿ ಪ್ರಮುಖವಾಗಿ ಸರ್ಕಾರದ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಶಕ್ತಿ, ಗೃಹಲಕ್ಷ್ಮಿ, ಗೃಹ ಜ್ಯೋತಿ ಹಾಗೂ ಯುವನಿಧಿ ಯೋಜನೆಯ ಲಾಂಛನಗಳನ್ನು ಅಳವಡಿಸಲಾಗಿದೆ. ವಾಹನದ ಇಕ್ಕೆಲದಲ್ಲಿ ಚಿತ್ರದುರ್ಗ ನಗರದ ಐತಿಹಾಸಿಕ ಕೋಟೆಯ ಚಿತ್ರಣದ ಫೋಟೋಗಳನ್ನು ಅಳವಡಿಸಲಾಗಿದ್ದು ಸ್ತಬ್ಧಚಿತ್ರ ವಾಹನವನ್ನು ಆಕರ್ಷಕವಾಗಿ ನಿರ್ಮಿಸಲಾಗಿದೆ.ಸ್ತಬ್ಧಚಿತ್ರ ವಾಹನದಲ್ಲಿ ಅಳವಡಿಸಲಾಗಿರುವ ಎಲ್‌ಇಡಿ ಪರದೆ ಸಂವಿಧಾನ ಪೀಠಿಕೆ, ಸಂವಿಧಾನ ರಚನೆ ಹಾಗೂ ಸರ್ಕಾರ ಸಾಧನೆಯ ವಿಡಿಯೋ ತುಣುಕುಗಳ ಪ್ರಸಾರ ಮಾಡಲಾಗುತ್ತಿದೆ. ಸ್ತಬ್ಧಚಿತ್ರ ವಾಹನಕ್ಕೆ ಚಾಲನೆ ಸಂದರ್ಭದಲ್ಲಿ ಸಂವಿಧಾನದ ಪೀಠಿಕೆ ಓದಲಾಯಿತು.

ಈಸಂದರ್ಭದಲ್ಲಿಶಾಸಕಕೆ.ಸಿ.ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಡಾ.ರಂಗಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

ಫಾಸ್ಟ್ ನ್ಯೂಸ್

ಶಾಸಕ ರಘುಮೂರ್ತಿಗೆ ಒಲಿದ ನಿಗಮಸ್ಥಾನ

» ಮೊದಲ ಪುಟದಿಂದ

ಪಕ್ಷಕ್ಕೆ ದುಡಿದವರಿಗೆ ನಿಗಮ ಮಂಡಳಿ ನೀಡಿ ಎಂದಿದ್ದ ಶಾಸಕ ಬಿ.ಜಿ.ಗೋವಿಂದಪ್ಪ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಅವರು ಕೆಲ ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ನಿಗಮ ಮಂಡಳಿ ವಿಚಾರವಾಗಿ ಪತ್ರ ಬರೆದಿದ್ದರು.ನನಗೆ ಪಕ್ಷ ನಾಲ್ಕು ಬಾರಿ ಪಕ್ಷ ಸ್ಪರ್ಧೆ ನೀಡಲು ಅವಕಾಶ ಮಾಡಿಕೊಟ್ಟಿದೆ. ಶಾಸಕನಾಗುವ ಅವಕಾಶ ಕಲ್ಪಿಸಿದೆ. ಹಾಗಾಗಿ ನಿಗಮ ಮಂಡಳಿ ಅಧಿಕಾರವನ್ನು ಪಕ್ಷಕ್ಕಾಗಿ ದುಡಿದ ಕಾರ್ಯಕರ್ತರಿಗೆ ಕೊಡಲು ಮನವಿ ಮಾಡಿದ್ದರು.

ಅಭಿವೃದ್ಧಿಗೆ ಸಹಕರಿಸಿ ನಿಗಮ ಬೇಡ ಎಂದಿದ್ದ ಶಾಸಕ ಟಿ.ರಘುಮೂರ್ತಿ: ಕಳೆದ ಹಲವು ದಿನಗಳ ಶಾಸಕ ಟಿ.ರಘುಮೂರ್ತಿ ನನಗೆ ಯಾವುದೇ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ಬೇಡ, ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಕಳೆದ ಹತ್ತು ವರ್ಷಗಳಿಂದ ಇದ್ದೇನೆ. ಮುಂದೆ ಸಹ ಯಾವುದೇ ಚ್ಯುತಿ ಬಾರದಂತೆ ಮುಂದುವರೆಯುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದು ಪತ್ರದಲ್ಲಿ ಅಭಿವೃದ್ಧಿ ಸದಾ ನಿಮ್ಮಸಹಕಾರವಿರಲಿ ಎಂದು ಮನವಿ ಮಾಡಿದ್ದರು. ಬಿ.ಜಿ.ಗೋವಿಂದಪ್ಪ ಮತ್ತು ರಘುಮೂರ್ತಿ ಅವರ ಮನವಿ ಪತ್ರದ ಹೊರತಾಗಿಯೂ ಈ ಇಬ್ಬರು ಶಾಸಕರಿಗೆ ನಿಗಮ ಮಂಡಳಿ ಸ್ಥಾನವನ್ನು ಸಿಎಂ ನೀಡಿದ್ದು ಶಾಸಕರು ಅಧಿಕಾರವನ್ನು ಅಲಂಕರಿಸುತ್ತಾರಾ ಎಂಬುದನ್ನು ಕಾದು ನೋಡಬೇಕಿದೆ.

94ನೇ ಶಿವನಾಮ ಸಪ್ತಾಹ: ಇಂದು ಸಭೆ

» ಚಿತ್ರದುರ್ಗ

ನಗರದ ಕರುವಿನ ಕಟ್ಟೆ ವೃತ್ತದಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದವತಿಯಿಂದ ನಡೆಯುವ 94ನೇ ಶಿವನಾಮ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಪೂರ್ವಭಾವಿ ಸಭೆಯನ್ನು ಜ. 27 ರ ಶನಿವಾರ ಸಂಜೆ 4.30ಕ್ಕೆ ನಗರದ ಶ್ರೀ ಸದ್ಗುರು ಕಬೀರಾನಂದಾಶ್ರಮದಆವರಣದಲ್ಲಿಕರೆಯಲಾಗಿದೆ ಎಂದು ಶ್ರೀ ಗುರು ಕಭೀರಾನಂದಾಶ್ರಮದ ಕಾರ್ಯದರ್ಶಿಗಳಾದ ವಿ.ಎಲ್.ಪ್ರಶಾಂತ್ ತಿಳಿಸಿದ್ದಾರೆ.ಶಿವನಾಮ ಸಪ್ತಾಹವೂ ಮಾರ್ಚಿ 2 ರಿಂದ 8ರವರೆಗೆ ನಡೆಯಲಿದ್ದು, ಇದರ ರೂಪು ರೇಷೆಗಳನ್ನು ನಿರ್ಧಾರ ಮಾಡುವ ಬಗ್ಗೆ ಹಾಗೂ ಭಕ್ತಾಧಿಗಳಿಂದ ಅಭೀಪ್ರಾಯವನ್ನು ಸಂಗ್ರಹ ಮಾಡುವ ಬಗ್ಗೆ ಈ ಸಭೆಯನ್ನು ಕರೆಯಲಾಗಿದೆ ಇದರ ದಿವ್ಯ ಸಮ್ಮುಖವನ್ನು ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ವಹಿಸಲಿದ್ದಾರೆ. ಭಕ್ತಾಧಿಗಳು ಸಕಾಲಕ್ಕೆ ಆಗಮಿಸುವುದರ ಮೂಲಕ ಸಲಹೆ ಸಹಕಾರ ನೀಡಿ 94ನೇ ಶಿವನಾಮ ಸಪ್ತಾಹದ ಯಶಸ್ವಿಗೆ ಕಾರಣರಾಗಬೇಕೆಂದು ಪ್ರಶಾಂತ್ ಮನವಿ ಮಾಡಿದ್ದಾರೆ.

ಫೆ. 08 ರಂದು ಮುಖ್ಯಮಂತ್ರಿಯವರಿಂದ ರಾಜ್ಯಮಟ್ಟದ ಜನಸ್ಪಂದನ

» ಚಿತ್ರದುರ್ಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರುವರಿ 08 ರಂದು ವಿಧಾನಸೌಧದ ಮುಂಭಾಗದಲ್ಲಿ ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮವನ್ನು ನಡೆಸಲಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸ್ಥಳದಲ್ಲಿಯೇ ಪರಿಹಾರ ಸೂಚಿಸಲಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್ ಅವರು ಇಂದು ಪೂರ್ವಸಿದ್ಧತಾ ಸಭೆ ನಡೆಸಿ, ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಜನಸ್ಪಂದನ ಕಾರ್ಯಕ್ರಮವನ್ನು ಅತ್ಯಂತ ವ್ಯವಸ್ಥಿತವಾಗಿ ಆಯೋಜಿಸಬೇಕು. ಮುಖ್ಯಮಂತ್ರಿಯವರು ನಡೆಸುತ್ತಿರುವ ಎರಡನೇ ಜನಸ್ಪಂದನ ಕಾರ್ಯಕ್ರಮ ಇದಾಗಿದ್ದು, ಎಲ್ಲ ಇಲಾಖೆಗಳ ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು ಹಾಜರಿದ್ದು, ವಿಶೇಷ ಆಸಕ್ತಿ ವಹಿಸಿ ಕುಂದು ಕೊರತೆ ನಿವಾರಣೆಗೆ ಕ್ರಮ ವಹಿಸಬೇಕೆಂದು ತಿಳಿಸಿದರು. ಜನಸ್ಪಂದನ ಕಾರ್ಯಕ್ರಮಕ್ಕೆ ಆಗಮಿಸುವ ವಿಶೇಷಚೇತನರು, ಹಿರಿಯನಾಗರಿಕರಿಗೆ ವಿಶೇಷ ವ್ಯವಸ್ಥೆಗಳನ್ನು ಮಾಡುವಂತೆ ಸೂಚಿಸಿದರು. ಸ್ವಚ್ಛತೆ, ಕುಡಿಯುವ ನೀರು, ಲಘು ಉಪಾಹಾರ, ಊಟದ ವ್ಯವಸ್ಥೆಗಳನ್ನು ಮಾಡುವ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕಳೆದ ಬಾರಿಯ ಜನಸ್ಪಂದನದಲ್ಲಿ ಸ್ವೀಕರಿಸಿದ ಅರ್ಜಿಗಳ ತ್ವರಿತ ವಿಲೇವಾರಿ ಮಾಡುವ ಬಗ್ಗೆ ಎಲ್ಲ ಇಲಾಖೆಗಳಿಗೆ ಪತ್ರ ಬರೆಯುವುದಾಗಿ ತಿಳಿಸಿದ ಅವರು ಕೆಡಿಪಿ ಸಭೆಯಲ್ಲಿಯೂ ಜನಸ್ಪಂದನ ಅರ್ಜಿ ವಿಲೇವಾರಿ ಪ್ರಗತಿ ಪರಿಶೀಲನೆ ನಡೆಸುವಂತೆ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಮಾಡಲಾಗುವುದು ಎಂದು ತಿಳಿಸಿದರು. ಜನಸ್ಪಂದನಕ್ಕೆ ಆಗಮಿಸುವ ಜನರ ಅನುಕೂಲಕ್ಕಾಗಿ ಮೆಜೆಸ್ಟಿಕ್ ಬಸ್ ನಿಲ್ದಾಣ ಹಾಗೂ ರೈಲ್ವೆ ನಿಲ್ದಾಣಕ್ಕೆ ಉಚಿತ ಬಸ್ ವ್ಯವಸ್ಥೆ ಮಾಡಲು ಸೂಚಿಸಿದರು. ವಿವಿಧ ಇಲಾಖೆಗಳ ಅರ್ಜಿ ಸ್ವೀಕಾರಕ್ಕೆ ಪ್ರತ್ಯೇಕ ಕೌಂಟರುಗಳನ್ನು ಸ್ಥಾಪಿಸಿ, ಅದಕ್ಕೆ ಅಗತ್ಯವಿರುವ ಎಲ್ಲ ಉಪಕರಣಗಳನ್ನೂ ಒದಗಿಸಲು ಹಾಗೂ ಸಿಬ್ಬಂದಿಯನ್ನೂ ನಿಯೋಜಿಸಲು ಇ–ಆಡಳಿತ ಇಲಾಖೆಗೆ ಸೂಚಿಸಿದರು. ಮನವಿದಾರರ ದೂರುಗಳನ್ನು ಪರಿಶೀಲಿಸಿ, ನಿಗದಿತ ಕೌಂಟರುಗಳಿಗೆ ತೆರಳಲು ಸೂಕ್ತ ಮಾರ್ಗದರ್ಶನ ನೀಡಲು ಪ್ರವೇಶ ದ್ವಾರದಲ್ಲಿಯೇ ಅಧಿಕಾರಿ, ಸಿಬ್ಬಂದಿಗಳ ಫೆಸಿಲಿಟೇಷನ್ ತಂಡವನ್ನು ನಿಯೋಜಿಸುವಂತೆ ನಿರ್ದೇಶನ ನೀಡಿದರು.

ಕಾಂಗ್ರೆಸ್ ಕಚೇರಿಯಲ್ಲಿ ಗಣರಾಜ್ಯೋತ್ಸವ

» ಹಿರಿಯೂರು

ಇಲ್ಲಿನ ತಾಲ್ಲೂಕು ಕಾಂಗ್ರೆಸ್ ಕಛೇರಿಯಲ್ಲಿ 75ನೇ ಗಣರಾಜ್ಯೋತ್ಸವ ಅಂಗವಾಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಖಾದಿ ಜೆ.ರಮೇಶ್ ಹಾಗೂ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಈರಲಿಂಗೇಗೌಡ ರವರು, ಧ್ವಜರೋಹಣ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಖಾದಿ ಜೆ.ರಮೇಶ್ ರವರು ನಮಗೆ ಇಂದು ಬಹಳ ಮುಖ್ಯವಾದ ದಿನ ನಮ್ಮ ಸಂವಿಧಾನವು 1950ರಲ್ಲಿ ಈ ದಿನದಂದು ಜಾರಿಬಂದಿದ್ದು, ಭಾರತ ಸಂವಿಧಾನವು ವಿಶ್ವದ ಅತೀ ದೊಡ್ಡ ಲಿಖಿತ ಸಂವಿಧಾನವಾಗಿದೆ. ಇದು ಭಾರತದ ಸರ್ವೋಚ್ಚ ಕಾನೂನು ಡಾ॥ ಬಾಬಾ ಸಾಹೇಬ್ ಅಂಬೇಡ್ಕರ್ ರವರು ಸಂವಿಧಾನದ ಪಿತಾಮಹಾರಾಗಿದ್ದಾರೆ ಎಂದು ತಿಳಿಸಿದರು.

ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಈರಲಿಂಗೇಗೌಡ ರವರು ಮಾತನಾಡಿ ಗಣರಾಜ್ಯೋತ್ಸವವು ಭಾರತೀಯ ರಾಷ್ಟ್ರೀಯ ಹಬ್ಬ ಈ ದಿನವು ಏಕತೆ ಮತ್ತು ಶಾಂತಿಯಿಂದ ಬದಕುಲ ಕಲಿಸುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕು ಹಿಂದುಳಿದ ವರ್ಗಗಳ ಅಧ್ಯಕ್ಷರಾದ ಗಂಗಾಧರ್, ಕಾರ್ಮಿಕ ಘಟಕದ ರಾಜ್ಯ ಕಾರ್ಯದರ್ಶಿಗಳಾದ ಡಾ॥ ಸುಜಾತ, ರಾಜ್ಯ ಅಲ್ಪಸಂಖ್ಯಾತ ಘಟಕ ಕೋ ಆರ್ಡಿನೇಟರ್ ರಜೀಯ ಸುಲ್ತಾನ , ನಗರಸಭಾ ಸದಸ್ಯರಾದ ಮಮತ, ಕವಿತ ಲೋಕೇಶ್, ರತ್ನಮ್ಮ, ಮೊದಲಮರಿಯಾ, ಸುರೇಖಾಮಣಿ ಜಬೀವುಲ್ಲಾ, ಸಮೀವುಲ್ಲಾ, ವಿಶಾಲಾಕ್ಷಮ್ಮ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಮಹಮ್ಮದ್ ಫಕೃದ್ದೀನ್, ಕೆ.ಡಿ.ಪಿ ನಾಮ ನಿರ್ದೇಶಿತ ಸದಸ್ಯರಾದ ದೊಡ್ಡಘಟ್ಟ ಶಿವಕುಮಾರ್, ಯುವ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಕೆ.ಡಿ.ಪಿ ನಾಮ ನಿರ್ದೇಶಿತ ಸದಸ್ಯರಾದ ಗುರುಪ್ರಸಾದ್, ಜಿಲ್ಲಾ ಆರೋಗ್ಯ ಸಮಿತಿ ಸದಸ್ಯರಾದ ಆರ್.ಚಿದಾನಂದಸ್ವಾಮಿ, ಜಿಲ್ಲಾ ಎಸ್.ಟಿ.ಘಟಕದ ಪ್ರಧಾನ ಕಾರ್ಯದರ್ಶಿಗಳಾದ ಸೊಂಡೇಕೆರೆ ನಾಗರಾಜ್, ಸೇವಾದಳ ಅಧ್ಯಕ್ಷರಾದ ವೆಂಕಟೇಶ್, ಎಸ್.ಟಿ.ಘಟಕ ಅಧ್ಯಕ್ಷರು ಹಾಗೂ ನಗರಸಭೆ ನಾಮನಿರ್ದೇಶಿತ ಸದಸ್ಯರಾದ ಗಿರೀಶ್, ಕಾರ್ಮಿಕ ಘಟಕ ಅಧ್ಯಕ್ಷರು ನಗರಸಭೆ ನಾಮನಿರ್ದೇಶಿತ ಸದಸ್ಯರಾದ ವಿ.ಶಿವಕುಮಾರ್, ಮಾರುತಿ ರಾವ್ ಜಾದವ್, ಭೀಮಯ್ಯ ಬಳಗಟ್ಟ ಹೊಸಯಳನಾಡು ಗ್ರಾಮ ಪಂಚಾಯಿತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಟಿ.ತಿಪ್ಪೇಸ್ವಾಮಿ, ಕೂನಿಕೆರೆ ಗ್ರಾಮ ಪಂಚಾಯಿತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ತಿಮ್ಮರಾಯಪ್ಪ, ದಿಂಡಾವರ ಪಂಚಾಯಿತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಂಗಸ್ವಾಮಿ, ಹರಿಶ್ಚಂದ್ರಘಾಟ್ ದುರುಗೇಶ್, ಲತೀಫ್ ಸಾಬ್, ಕರಿಯಮ್ಮ, ಶರ್ಮಿಳಾ, ಹೀನಾ ಕೌಸರ್, ದಿಂಡಾವರ ಮಲ್ಲಿಗಮ್ಮ, ವಸುದ, ಭಾಗ್ಯಮ್ಮ, ಅರ್ಷಫ್ ಜಾನ್, ತನುಜ, ಸಿದ್ದಗಂಗಮ್ಮ,ಅಯೂಬ್, ಬಳಗಟ್ಟ ಗುರುಸ್ವಾಮಿ, ತಳವಾರಹಟ್ಟಿ ಮೂರ್ತಿ, ವಿ.ಕೆ.ಗುಡ್ಡೆ ತಿಪ್ಪೇಸ್ವಾಮಿ, ಗೌಡನಹಳ್ಳಿ ಕರಿಯಣ್ಣ, ಆದಿವಾಲ ಇಮ್ರಾನ್, ವೀರವ್ವನಾಗತೀಹಳ್ಳಿ ರಂಗಸ್ವಾಮಿ, ಬಳಗಟ್ಟ ಆರ್ ತಿಪ್ಪೇಸ್ವಾಮಿ, ಸವಿತ ಸಮಾಜ ಅಧ್ಯಕ್ಷರಾದ ಬಸವರಾಜ್, ಅಬ್ಬಿನಹೊಳೆ ವೀರಭದ್ರಪ್ಪ, ನಾಗರಾಜ್ ಇನ್ನೂ ಹಲವಾರು ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

ಭಾರತ ಸಮಾನತೆಯ ಸಂವಿಧಾನ: ತಹಶೀಲ್ದಾರ್ ರಾಜೇಶ್ ಕುಮಾರ್

» ಹಿರಿಯೂರು

ನಮ್ಮ ಭವ್ಯ ಭಾರತ ದೇಶವು ಸಮಾನತೆಯ ಸಂವಿಧಾನವನ್ನು ರೂಪಿಸಿದೆ ಸಂವಿಧಾನಕ್ಕೆ ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ತಹಶೀಲ್ದಾರ್ ರಾಜೇಶ್ ಕುಮಾರ್ ಹೇಳಿದರು. ನಗರದ ನೆಹರು ಮೈದಾನದಲ್ಲಿ ಆಯೋಜಿಸಿದ್ದ 75ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ನಮ್ಮ ಸಂವಿಧಾನದಲ್ಲಿ ದೇಶದ ಜನಜೀವನದ ಆಶೋತ್ತರಗಳು ಇವೆ ದೇಶದ ಜನತೆಗೆ ನ್ಯಾಯ ಸ್ವಾತಂತ್ರ್ಯ ಸಮಾನತೆ ಮತ್ತು ಭಾತೃತ್ವ ಭಾವನೆ ಒದಗಿಸುವುದು ನಮ್ಮ ಗುರಿಯಾಗಿದೆ ಎಂದರು ಹಾಗೂ ಅನೇಕ ಸರಕಾರಿ ಯೋಜನೆಗಳ ಬಗ್ಗೆ ತಿಳಿಸಿದರು ಭಾರತದಲ್ಲಿ 43 ಕೋಟಿ ಮಕ್ಕಳಿದ್ದು ಸಮರ್ಥ ಪ್ರಜೆಗಳಾಗಿ ರೂಪುಗೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿಪೌರಾಯುಕ್ತರಾದ ಹೆಚ್ ಮಹಾಂತೇಶ್ ನಗರಸಭೆ ಸದಸ್ಯರಾದ ಶಿವರಂಜನಿಯಾದವ್, ಅಂಬಿಕಾ ವಿಶಾಲಾಕ್ಷಿ ರತ್ನಮ್ಮ ಸುರೇಖಾ ಮೊದಲ ಮರಿಯ ಜೆ.ಆರ್.ಅಜಯ್ ಕುಮಾರ್ ಎಂ.ಡಿ.ಸಣ್ಣಪ್ಪ ಈರಲಿಂಗೇಗೌಡ ಬಿ ಎನ್ ಪ್ರಕಾಶ್ ಸಮೀವುಲ್ಲಾ ಡಿವೈಎಸ್ಪಿ ಚೈತ್ರ ತಾಲೂಕು ಆರೋಗ್ಯ ಅಧಿಕಾರಿ ವೆಂಕಟೇಶ್ ಕ.ಸಾ.ಪ ಅಧ್ಯಕ್ಷ ವಿ.ಎಂ.ನಾಗೇಶ್ ಬಿ.ಇ.ಓ ತಿಪ್ಪೇಸ್ವಾಮಿ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸತೀಶ್ ಕುಮಾರ್ ರೈತ ಮುಖಂಡರಾದ ಹೊರೆಕೇರಪ್ಪ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಖಾದಿ ರಮೇಶ್ ಪಾಲ್ಗೊಂಡಿದ್ದರು.

ರಾಷ್ಟ್ರ ಮಟ್ಟದ ಜಂಗಿ ಕುಸ್ತಿ ಪಂದ್ಯದಲ್ಲಿ ಪ್ರಶಸ್ತಿ ವಿತರಿಸಿದ ಶಾಸಕ ಟಿ.ರಘುಮೂರ್ತಿ

ಚಿತ್ರದುರ್ಗ: ನಗರದ ಹಳೆ ಮಾಧ್ಯಮಿಕ ಶಾಲಾ ಮ

ಫಾಸ್ಟ್ ನ್ಯೂಸ್

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ 75 ನೇ ಗಣರಾಜ್ಯೋತ್ಸವವನ್ನು ಡಾ.ಎಂ.ಚಂದ್ರಪ್ಪ ಧ್ವಜಾರೋಹಣ ನೆರವೇರಿಸುವ ಮೂಲಕ ಉದ್ಘಾಟಿಸಿದರು

ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಗಣರಾಜ್ಯೋತ್ಸವ ಆಚರಣೆ

» ಚಿತ್ರದುರ್ಗ

ಇಂದು ಚಿತ್ರದುರ್ಗದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ 75ನೇ ಗಣರಾಜ್ಯೋತ್ಸವದ ಅಂಗವಾಗಿ ಜಿಲ್ಲಾಧ್ಯಕ್ಷರಾದ ಎ ಮುರುಳಿ ಅವರು ಧ್ವಜಾರೋಹಣ ನೆರವೇರಿಸಿ ಗಣರಾಜ್ಯೋತ್ಸವದ ಮಹತ್ವವನ್ನು ಹಾಗು ನರೇಂದ್ರ ಮೋದಿ ಅವರು ಪ್ರಧಾನಿಯಾಗಿ 10 ವರ್ಷ ಪೂರೈಸಿದ ಅಭಿವೃದ್ಧಿ ಕಾರ್ಯಗಳ ಬಗ್ಗೆ ತಿಳಿಸಿದರು . ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ನಗರ ಅಧ್ಯಕ್ಷರಾದ ನವೀನ್ ಚಾಲುಕ್ಯ, ಯುವ ಮುಖಂಡರಾದ ಡಾ ಸಿದ್ದಾರ್ಥ್, ಗ್ರಾಮಾಂತರ ಅಧ್ಯಕ್ಷರಾದ ಕಲ್ಲೇಶಯ್ಯ, ಮುಖಂಡರಾದ ಸಂಪತ್ ಕುಮಾರ್, ನರೇಂದ್ರ ಹೊನ್ನಲ್,ಮಾಧುರಿ ಗಿರೀಶ್, ವೆಂಕಟೇಶ್ ಯಾದವ್,ನಾಗರಾಜ್ ಬೇದ್ರೆ, ದಗ್ಗೆ ಶಿವಪ್ರಕಾಶ್, ಶೈಲಜಾ ರೆಡ್ಡಿ, ಶ್ಯಾಮಲಾ, ರತ್ನಮ್ಮ, ಭಾರ್ಗವಿ, ಬಸಮ್ಮ,ಶಾಂತಮ್ಮ,ಶಂಭು,ಕಿರಣ್,ವೀರೇಶ್,ರಾಮ ಎ, ಚಂದ್ರು ಮುಂತಾದವರು ಉಪಸ್ಥಿತರಿದ್ದರು

ಮಡಿವಾಳ ಮಾಚಿದೇವ ಜಯಂತಿ: ಜ.29ರಂದು ಪೂರ್ವಬಾವಿ ಸಭೆ.

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಫೆ.1ರಂದು ನಡೆಸಲು ಉದ್ದೇಶಿಸಿದ್ದು ಕಾರ್ಯಕ್ರಮದ ರೂಪುರೇಷೆಗಳ ಬಗ್ಗೆ ತಾಲ್ಲೂಕು ಆಡಳಿತ ಮತ್ತು ಸಮುದಾಯದ ಮುಖಂಡರೊಂದಿಗೆ ಚರ್ಚಿಸಲು ಜ.29ರ ಸೋಮವಾರ ಮಧ್ಯಾಹ್ನ 4ಕ್ಕೆ ತಾಲ್ಲೂಕು ಕಚೇರಿಯಲ್ಲಿ ಸಭೆ ಕರೆಯಲಾಗಿದೆ ಎಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದ್ದಾರೆ.

ಮಡಿವಾಳ ಜಯಂತಿ ಹಿನ್ನೆಲೆಯಲ್ಲಿ ಆಯೋಜಿಸಿರುವ ಪೂರ್ವಭಾವಿ ಸಭೆಗೆ ಮಡಿವಾಳ ಸಮಾಜದ ಎಲ್ಲಾ ಹಂತದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಗೆ ಹಾಜರಾಗುವಂತೆ ಅಧ್ಯಕ್ಷ ಎನ್.ಮಂಜುನಾಥ, ಗೌರವಾಧ್ಯಕ್ಷ ನಾಗರಾಜು, ಉಪಾಧ್ಯಕ್ಷ ಪುಟ್ಟಲಿಂಗಪ್ಪ, ಕಾರ್ಯದರ್ಶಿ ಕುಶಾಲಪ್ಪ ಮನವಿ ಮಾಡಿದ್ದಾರೆ.

ಅಪ್ರಾಪ್ತ ಬಾಲಕಿಯೊಂದಿಗೆ ಬಲವಂತ ಲೈಗಿಂಕ ಸಂಪರ್ಕ; ಗರ್ಭಿಣಿಯಾದ ಬಾಲಕಿಗೆ ಗರ್ಭಪಾತ: ಪೋಲೀಸರಿಗೆ ದೂರು

» ಚಳ್ಳಕೆರೆ

ತಾಲ್ಲೂಕಿನ ಭರಮಸಾಗರ ಗ್ರಾಮದಲ್ಲಿ ವೀರೇಶ್(19)ಎಂಬ ಯುವಕ ಅದೇ ಗ್ರಾಮದ ಪಕ್ಕದ ಮನೆಯಲ್ಲಿರುವ ಅಪ್ರಾಪ್ತ ಬಾಲಕಿಗೆ ಮದುವೆಯಾಗುವ ಆಮೀಷವೊಡ್ಡಿ ಬಲವಂತವಾಗಿ ಮನೆಯಲ್ಲಿ ಯಾರೂ ಇಲ್ಲದ ಸಂದರ್ಭದಲ್ಲಿ ಅವಳನ್ನು ಪುಸಲಾಯಿಸಿ ಪಕ್ಕದಲ್ಲಿ ಪಾಳುಬಿದ್ದ ಮನೆಯೊಂದಕ್ಕೆ ಕರೆದೊಯ್ದು ಅಕ್ರಮವಾಗಿ ಲೈಗಿಂಕ ಸಂಪರ್ಕ ಹೊಂದಿದ ಹಿನ್ನೆಲೆಯಲ್ಲಿ ಅಪ್ರಾಪ್ತ ಬಾಲಕಿ ಗರ್ಭವತಿಯಾಗಿರುತ್ತಾಳೆ. ಈ ಬಗ್ಗೆ ಮಾಹಿತಿ ಪಡೆದ ವೀರೇಶ್ ಆಕೆಗೆ ಯಾವುದೋ ಮಾತ್ರೆ ನೀಡಿ ಗರ್ಭಪಾತವಾಗುವಂತೆ ಮಾಡಿದ್ದು, ಆಕೆ ರಕ್ತಸ್ರಾವದಿಂದ ನಿತ್ರಾಣವಾಗಿದ್ದನ್ನು ಕೂಡಲೇ ಮಾಹಿತಿ ಪಡೆದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ನೊಂದ ಬಾಲಕಿಯನ್ನು ರಕ್ಷಿಸಿ ಚಿತ್ರದುರ್ಗದ ಮಕ್ಕಳ ಆರೈಕೆ ಕೇಂದ್ರದಲ್ಲಿ ಇರಿಸಿ ದೂರು ನೀಡಲಾಗಿದೆ. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಆರೋಪಿ ವೀರೇಶ್‌ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

ರಾಷ್ಟ್ರದ ಪ್ರತಿಯೊಬ್ಬ ನಾಗರೀಕನ ರಕ್ಷಣೆಯ ಜೊತೆಗೆ ಎಲ್ಲಾ ರೀತಿಯ ಭರವಸೆ ಈಡೇರಿಸುವ ಸಾಮರ್ಥ್ಯ ಸಂವಿಧಾನಕ್ಕಿದೆ: ಶಾಸಕ

ಗಣರಾಜ್ಯೋತ್ಸವ ಉತ್ತಮ ಆಡಳಿತಕ್ಕೆ ಮಾರ್ಗದರ್ಶಿ

» ಚಳ್ಳಕೆರೆ

ರಾಷ್ಟ್ರದೆಲ್ಲೆಡೆ 75ನೇ ಗಣರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಸ್ವಾತಂತ್ರ್ಯ ಪಡೆದ ನಂತರ ಸ್ವಾತಂತ್ರ್ಯಕ್ಕಾಗಿ ಪ್ರಾಣ ತ್ಯಾಗಮಾಡಿದ ಅನೇಕರನ್ನು ಗೌರವಿಸಿ ಆಡಳಿತ ಹಿತದೃಷ್ಟಿಯಿಂದ 1950ರಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನವನ್ನು ಅಂಗೀಕರ ಅದಕ್ಕೆ ಆಡಳಿತಸ್ವರೂಪ ನೀಡಿ ಗಣರಾಜ್ಯೋತ್ಸವವಾಗಿ ಮಾರ್ಪಾಟಿದ್ದು, ಇಂದಿಗೂ ಸಹ ನಾವು ದೇಶದ ಇಡೀ ಸಂಭ್ರಮ ಆಚರಣೆ ಮಾಡುತ್ತಿದ್ದೇವೆ. ಪ್ರತಿಯೊಬ್ಬ ಭಾರತಿಯನು ಸಂತಸ ಪಡುವ ದಿನವಾಗಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ತಾಲ್ಲೂಕು ರಾಷ್ಟ್ರೀಯಹಬ್ಬಗಳಸಮಿತಿಹಮ್ಮಿಕೊಂಡಿದ್ದ 75ನೇ ಗಣರಾಜ್ಯೋತ್ಸವ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ವಿಶ್ವದಲ್ಲೇ ಪ್ರಜಾಪ್ರಭುತ್ವದ ತಳಹದಿಯಲ್ಲಿ ಆಡಳಿತ ನಡೆಸುತ್ತಿರುವ ಏಕೈಕ ರಾಷ್ಟ್ರ ಭಾರತ. ಸಂವಿಧಾನದಲ್ಲಿ ಎಲ್ಲರೂ ಸಮಾನತೆಯನ್ನು ರೂಪಿಸುವಲ್ಲಿ ಅಂಬೇಡ್ಕರ್ ಯಶಸ್ವಿಯಾದರು. ದೇಶದ ಅಭಿವೃದ್ಧಿ ಹಾಗೂ ಪ್ರಗತಿಪರ ಚಿಂತನೆಗೆ ಇದು ಸಹಕಾರಿಯಾಗಿದೆ. ನಾವೆಲ್ಲರೂ ಅಂಬೇಡ್ಕರ್ ಆಶಯಗಳನ್ನು ಪೂರ್ಣಗೊಳಿಸುವ ಸಂಕಲ್ಪ ಮಾಡೋಣವೆಂದರು.

ಧ್ವಜರೋಹಣ ನೆರವೇರಿಸಿ ಸಂದೇಶ ನೀಡಿದ ತಹಶೀಲ್ದಾರ್ ರೇಹಾನ್‌ಪಾಷ, ರಾಷ್ಟ್ರದ ಗಣರಾಜ್ಯೋತ್ಸವ ನಾವೆಲ್ಲರೂ ಹೆಮ್ಮೆಪಡುವ ವಿಷಯವಾಗಿದೆ. ಸಂವಿಧಾನ ರಚನೆಯಲ್ಲಿ ಅನೇಖ ತಜ್ಞರು ಕಾರ್ಯನಿರ್ವಹಿಸಿದ್ದಾರೆ. ಆದರೆ, ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನ ಎಲ್ಲರಿಗೂ ಮೆಚ್ಚುಗೆಯಾಗಿ ಅಂಗೀಕರವಾಯಿತು. ಅವರ ಸಂವಿಧಾನವನ್ನು ಆಡಳಿತಾತ್ಮಕವಾಗಿ ಅಂಗೀಕಾರ ನೀಡಿದ ದಿನವನ್ನು ಗಣರಾಜ್ಯೋತ್ಸವ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಪೌರಕಾರ್ಮಿಕ ಎನ್.ಜಯಣ್ಣ, ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಮಕ್ಕಳ ತಜ್ಞ ಬಿ.ಚಂದ್ರನಾಯ್ಕ, ಕೃಷಿ ಸಾಧಕ ತಿಪ್ಪೇಸ್ವಾಮಿ, ಸೇವಾ ಚಟುವಟಿಕೆಗೆ ಚಿತ್ರಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಪ್ರೊ.ಎಂ.ಶಿವಲಿಂಗಪ್ಪರವರನ್ನು ಸನ್ಮಾನಿಸಲಾಯಿತು. ಸಾಂಸ್ಕೃತಿಕ ವಿಭಾಗದಲ್ಲಿ ಮಲ್ಲಕಂಬ ಪ್ರದರ್ಶಿಸಿದ ರೋಟರಿ ಮಾಕಂಸ್‌ಶಾಲೆ, ಎಚ್‌ಟಿಟಿ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿಗಳು ಪ್ರದರ್ಶಿಸಿದ ದೇಶ ಭಕ್ತಿಗೀತೆಯ ನೃತ್ಯಕ್ಕೆ ಬಹುಮಾನ ನೀಡಲಾಯಿತು. ಪ್ರಗತಿ ವಿದ್ಯಾಲಯ ಮಕ್ಕಳು ಹಾಗೂ ಕ್ಷೇತ್ರಮಾದರಿ ಮಕ್ಕಳು ಸಹ ಬಹುಮಾನ ಪಡೆದರು.

ಕಾರ್ಯಕ್ರಮದಲ್ಲಿ ಡಿವೈಎಸ್‌ಪಿ ಟಿ.ಬಿ.ರಾಜಣ್ಣ, ವೃತ್ತ ನಿರೀಕ್ಷಕ ಆರ್. ಎಫ್.ದೇಸಾಯಿ, ಕೆ.ಸಮೀರುಲ್ಲಾ, ಇಒ ಎಚ್.ಶಶಿಧರ, ಪೌರಾಯುಕ್ತ ಸಿ.ಚಂದ್ರಪ್ಪ, ಬಿಇಒ.ಕೆ.ಎಸ್.ಸುರೇಶ್,ಪಶುವೈದ್ಯಾಧಿಕಾರಿ ರೇವಣ್ಣ, ಪಿಆರ್‌ಡಿ ಎಇಇ ಕಾವ್ಯ, ಕೃಷಿ ಅಧಿಕಾರಿ ಅಶೋಕ್, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಕಾರ್ಮಿಕ ಅಧಿಕಾರಿ ಕುಸುಮ, ಅರಣ್ಯ ಅಧಿಕಾರಿ ಬಹುಗುಣ, ಬಿಸಿಎಂ ಅಧಿಕಾರಿ ದಿವಾಕರ್, ಎಸ್ಟಿ ಅಧಿಕಾರಿ ಶಿವರಾಜ್, ಸಿಡಿಪಿಒ ಹರಿಪ್ರಸಾದ್, ಸಮಾಜಕಲ್ಯಾಧಿಕಾರಿ ಮಂಜಪ್ಪ, ಸರ್ಕಾರಿನೌಕರಸಂಘದಅಧ್ಯಕ್ಷ ಪಿ.ಎಲ್.ಲಿಂಗೇಗೌಡ, ಕಸಾಪ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ, ಸದಸ್ಯರಾದ ಸುಮಕ್ಕ, ಆರ್.ಮಂಜುಳಾ, ಸಾಕಮ್ಮ, ಪ್ರಕಾಶ್, ಮಲ್ಲಿಕಾರ್ಜುನ್, ಕವಿತಾ, ಟಿ.ಶಿವಕುಮಾರ್, ಸುಜಾತ, ಸುಮಾ, ನಾಗಮಣಿ, ಡಿ.ನಿರ್ಮಲ, ರಮೇಶ್‌ಗೌಡ, ಕೆ.ವೀರಭದ್ರಯ್ಯ, ಜೈತುಂಬಿ, ಪಾಲಮ್ಮ, ಮುಂತಾದವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗಣರಾಜ್ಯೋತ್ಸವ

» ಚಿತ್ರದುರ್ಗ

ನಮ್ಮ ದೇಶದಲ್ಲಿ ವಿವಿಧ ಜಾತಿ, ಧರ್ಮಿಯರು ಭಾಷೆಯನ್ನು ಮಾತನಾಡುವವರನ್ನು ವಿವಿಧ ರೀತಿಯ ವೃತ್ತಿಯಲ್ಲಿರುವವರಿಗೆ ಒಗ್ಗಟಾಗಿ ಇರಲು ಸಂವಿದಾನ ಕಾರಣವಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಎಂ.ಕೆ. ತಾಜ್ ಪೀರ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯ ಮುಂಭಾಗದಲ್ಲಿ ಹಮ್ಮಿಕೊಂಡಿದ್ದ 75ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರ ಧ್ವಜಾರೋಹಣವನ್ನು ನೇರವೇರಿಸಿ ಮಾತನಾಡಿದ ಅವರು, ಇಂದು ನಾವು 75ನೇ ಗಣರಾಜ್ಯೋತ್ಸವವನ್ನು ಆಚರಣೆ ಮಾಡುತ್ತಿದ್ದೆವೆ ಕಳೆದ 2023ರಲ್ಲಿ 75ನೇ ಸ್ವಾತಂತ್ರಯ ದಿನಾಚರಣೆಯನ್ನು ಆಚರಣೆ ಮಾಡಿದ್ದೇವೆ ಇದು ನಮ್ಮ ಸೌಭಾಗ್ಯವಾಗಿದೆ ಎಂದರು.

ದೇಶಕ್ಕೆ ಸ್ವಾತಂತ್ರ್ಯವನ್ನು ತಂದು ಕೊಟ್ಟಿದು ಕಾಂಗ್ರೆಸ್ ಪಕ್ಷವಾಗಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಕಾಂಗ್ರೆಸ್ ಪಕ್ಷದ ಅನೇಕ ನಾಯಕರು ಹೋರಾಟವನ್ನು ಮಾಡಿ ತಮ್ಮ ಪ್ರಾಣವನ್ನು ಬಲಿದಾನ ಮಾಡಿದ್ದಾರೆ.ಸ್ವಾತಂತ್ರ್ಯ ಬಂದ ನಂತರ 1950ರಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ರವರು ಸಂವಿಧಾನ್ನು ನೀಡಿದರು ಅದನ್ನು ಒಪ್ಪಿಕೊಂಡು ಸಂವಿಧಾನದಡಿಯಲ್ಲಿ ನಾವು ಜೀವನವನ್ನು ನಡೆಸುತ್ತೇವೆ ಇದು ನಮ್ಮ ದೇಶಕ್ಕೆ ಕೊಡುಗೆಯಾಗಿದೆ. ಎಂದು ತಿಳಿಸಲಾಗಿದೆ.ಮುಂದಿನ ಪೀಳೀಗೆಯನ್ನು ಸಹಾ ನಮ್ಮ ಸಂವಿಧಾನ ಅಡಿಯಲ್ಲಿ ರಕ್ಷಣೆಯನ್ನು ನೀಡುವಂತಾಗಬೇಕಿದೆ. ಅದನ್ನು ಕಾಪಾಡುವ ಜವಾಬ್ದಾರಿ ಪ್ರತಿಯೊಬ್ಬ ಕಾಂಗ್ರೇಸ್ ಪಕ್ಷದ ಸದಸ್ಯರಲ್ಲಿ ಇದೆ. ಎಂದು ತಾಜ್ ಪೀರ್ ತಿಳಿಸಿದರು.

ಈಗ ಸಂವಿಧಾನವನ್ನು ಬುಡದಿಂದ ತೆಗೆಯುವ ಹುನ್ನಾರ ಈಗ ದೇಶದಲ್ಲಿ ನಡೆಯುತ್ತಿದೆ ಆದರೆ ಇದರಲ್ಲಿ ಯಾರು ಸಹಾ ಯಶಸ್ವಿಯಾಗುವುದಿಲ್ಲ, ಅಂಬೇಡ್ಕರ್ ನೀಡಿರುವ ಸಂವಿದಾನದಲ್ಲಿ ಬದಲಾವಣೆ ಮಾಡಬೇಕಾದರೂ ಸಹಾ ಅದನ್ನು ಸಂವಿಧಾನದ ಅಡಿಯಲ್ಲಿಯೇ ಮಾಡಬೇಕಿದೆ. ಹೂರಗಿನಿಂದ ಮಾಡಲು ಸಾಧ್ಯವಿಲ್ಲ, ಇದರಿಂದ ನಮ್ಮ ಸಂವಿಧಾನ ದೇಶ ಮಾತ್ರವಲ್ಲ ಪ್ರಪಂಚದಲ್ಲಿಯೇ ಶ್ರೇಷ್ಠವಾದ ಸಂವಿಧಾನವಾಗಿದೆ.ಸಂವಿಧಾನವನ್ನು ನಮ್ಮ ಮುಂದಿನಪೀಳೆಗೆಗೆಸಹಾಮುಂದುವರೆಸಿಕೊಂಡು ಹೋಗುವಂತ ಕಾರ್ಯಾವಾಗಬೇಕಿದೆ. ಇದಕ್ಕೆ ಎಲ್ಲರ ಪ್ರೇರಣೇ ನೀಡಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವರಾದ ಹೆಚ್. ಅಂಜನೇಯ,ಜಿಲ್ಲಾಪ್ರಧಾನಕಾರ್ಯದರ್ಶಿಗಳಾದ ಸಂಪತ್ ಕುಮಾರ್ ಮೈಲಾರಪ್ಪ, ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿ ಗೌಡ, ಮಾಜಿ ಅಧ್ಯಕ್ಷರಾದ ಫಾತ್ಯರಾಜನ್, ಜೆ.ಜೆ. ಹಟ್ಟಿ ತಿಪ್ಪೇಸ್ವಾಮಿ, ನರಸಿಂಹರಾಜು, ಮುದಸಿರ್, ಲಕ್ಷ್ಮೀಕಾಂತ್, ಅಲ್ಲಾಭಕ್ಷಿ, ಶ್ರೀಮತಿ ಜಯ್ಯಮ್ಮ, ಲೋಕೇಶ್, ಸೈಯದ್ ಆಫಾಖ್ ಆಹ್ಮಮದ್, ಮೋಕ್ಷ ರುದ್ರಸ್ವಾಮಿ ಸೇರಿದಂತೆ ಇತರೆ ವಿವಿಧ ಘಟಕಗಳ ಪದಾಧಿಕಾರಿಗಳು ಭಾಗವಹಿಸಿದ್ದರು,

ತದ ನಂತರ ಗಾಂಧಿಜೀ ಮತ್ತು ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ನಮನವನ್ನು ಸಲ್ಲಿಸಲಾಯಿತು.

ರೇಖಲಗೆರೆ ಸರ್ಕಾರಿ ಶಾಲೆಯಲ್ಲಿ 75ನೇ ವರ್ಷದ ಗಣರಾಜ್ಯೋತ್ಸವ

» ನಾಯಕನಹಟ್ಟಿ

ಹೋಬಳಿಯ ರೇಖಲಗೆರೆ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ 75ನೇ ವರ್ಷದ ಗಣರಾಜ್ಯೋತ್ಸವ ಧ್ವಜರೋಹಣವನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಪ್ರಕಾಶ ನೆರವೇರಿಸಿದರು. ಈ ಸಂದರ್ಭದಲ್ಲಿ ಉಪಸ್ಥಿತರಾದ ಗ್ರಾಮ ಪಂಚಾಯಿತಿ ಸದಸ್ಯ ಬಸಮ್ಮ, ಬಿ.ವಿರೇಶ್, ತಿಪ್ಪೇಸ್ವಾಮಿ ಶಿಕ್ಷಕರು, ನಾಗರಾಜ್, ರಾಜೇಶ್, ಶಿಕ್ಷಕಿಯರಾದ ಉಮಾದೇವಿ, ಸ್ವಾತಿ, ಪೋಷಕರು, ಮಕ್ಕಳು ಈ ಕಾರ್ಯಕ್ರಮದಲ್ಲಿ ಇದ್ದರು.

ಭಾರತೀಯ ಯೋಗ ಶಿಕ್ಷಣ ಸಂಸ್ಥೆವತಿಯಿಂದ ಗಣರಾಜ್ಯೋತ್ಸವ

» ಚಿತ್ರದುರ್ಗ

ಬಾಬಾ ಸಾಹೇಬ್ ಅಂಬೇಡ್ಕರ್ ರವರು ಸಂವಿಧಾನದ ಮೂಲಕ ಭಾರತೀಯರಿಗೆ ಸಮಾನತೆ, ಸ್ವತಂತ್ರತೆ, ಧರ್ಮ, ಸಂಸ್ಕೃತಿ, ಶಿಕ್ಷಣ ಮತ್ತು ಇತರ ಹಕ್ಕುಗಳು ದೊರೆಯುವಂತೆ ಮಾಡಿದ್ದರಿಂದ ಭಾರತದಲ್ಲಿ ಅಸಮಾನತೆಯ ಮುಸುಕು ಕಳೆದು ಸಮಾಜದಲ್ಲಿ ಏಕತೆಯ ಬೆಳಕು ಮೂಡಿತು. ಗಣರಾಜ್ಯೋತ್ಸವದ 75ನೇ ವರ್ಷಾಚರಣೆಯ ಈ ಸಂಧರ್ಭದಲ್ಲಿ ಸಂವಿಧಾನವನ್ನು ಓದಿ ಅರಿಯುವುಸು ಮತ್ತು ಇತರರಲ್ಲಿ ಸಂವಿಧಾನದ ಬಗ್ಗೆ ಅರಿವು ಮೂಡಿಸುವುದು ಪ್ರತಿಯೊಬ್ಬ ಪ್ರಜೆಯ ಜವಾಬ್ದಾರಿಯಾಗಿದೆ ಎಂದು ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಅಧ್ಯಕ್ಷ ಹಾಗೂ ಯೋಗ ಗುರು ರವಿ ಕೆ.ಅಂಬೇಕರ್ ಅಭಿಪ್ರಾಯ ಪಟ್ಟಿದ್ದಾರೆ.

ನಾಯಕನಹಟ್ಟಿ ಪಟ್ಟಣದ ಉರ್ದು ಶಾಲೆಯಲ್ಲಿ ಗಣರಾಜ್ಯೋತ್ಸವ

» ನಾಯಕನಹಟ್ಟಿ

ನಮ್ಮ ಭಾರತ ದೇಶಕ್ಕೆ ಸಂವಿಧಾನವನ್ನು ಬರೆದುಕೊಟ್ಟಂತ ಪಿತಾಮಹ ಎಂದು ಎನಿಸಿಕೊಂಡಿರುವ ಬಾಬಾ ಸಾಹೇಬ್ ಡಾ॥ಬಿ. ಆರ್.ಅಂಬೇಡ್ಕರ್ ರವರು ನಮ್ಮ ಹಿರೋ ಎಂದು ಪಟ್ಟಣ ಪಂಚಾಯಿತಿ ಸದಸ್ಯ ಸೈಯದ್ ಅನ್ವರ್ ಹೇಳಿದರು.

ಪಟ್ಟಣದ ಉರ್ದು ಶಾಲೆಯಲ್ಲಿ ಸೋಮವಾರ ನಡೆದ 75ನೇ ವರ್ಷದ ಗಣರಾಜ್ಯೋತ್ಸವದ ಧ್ವಜರೋಹಣ ನೇರವೆರಿಸಿ ಮಾತನಾಡಿದ ಅವರು ಮಕ್ಕಳು ಚೆನ್ನಾಗಿ ಓದಬೇಕು ಈ ಶಾಲೆಗೆ, ಈ ಪಟ್ಟಣಕ್ಕೆ ಕೀರ್ತಿ ತರಬೇಕು ಎಂದರು. ಭಾರತದ ಜನರಿಗೆ ಹಬ್ಬಕ್ಕಿಂತ ಕಡಿಮೆ ಇಲ್ಲ, ಪ್ರತಿಯೊಬ್ಬ ಭಾರತೀಯನಿಗೂ ಇದು ಅತ್ಯಂತ ಶುಭ ಮತ್ತು ಐತಿಹಾಸಿಕ ದಿನದಂದು ಪ್ರತಿಯೊಬ್ಬ ಸಣ್ಣ ಮತ್ತು ದೊಡ್ಡ ವ್ಯಕ್ತಿಗಳು, ಸರ್ಕಾರಿ ಮತ್ತು ಅರೆಸರ್ಕಾರಿ, ಖಾಸಗಿ ಸಂಸ್ಥೆಗಳು, ಕಛೇರಿಗಳು, ಶಾಲೆಗಳಲ್ಲಿ ಬಹಳ ಉತ್ಸವದಿಂದ ಆಚರಿಸುತ್ತಾರೆ. 1947 ರಲ್ಲಿ ಸ್ವಾತಂತ್ರ್ಯ ಪಡೆದ ನಂತರ ಸಂವಿಧಾನ ರಚನ ಸಮಿತಿಯ ಮೂಲಕ ಸ್ವಾತಂತ್ರ್ಯ ಹೋರಾಟದ ಉದ್ದೇಶವನ್ನು ಸಾಧಿಸಿ ನಂತರ ಜನವರಿ 26 1950 ರಂದು ಜಾರಿಗೆ ಬಂದಿತು ಎಂದು ಅವರು ಮಾತನಾಡಿದರು.

1950ರ ಜನವರಿ 26 ರಂದು ಸಂವಿಧಾನವನ್ನು ಅಂಗೀಕರಿಸುವ ಮೂಲಕ ಗಣರಾಜ್ಯ ಎಂದು ಘೋಷಿಸಲ್ಪಟ್ಟ ದಿನವಾಗಿದೆ ಎಂದು ಅವರು ಮಾತನಾಡಿದರು.

ಪ್ರಮುಖ ಸುದ್ದಿ

ಕೇಂದ್ರದ ರೈತ ವಿರೋಧಿ ನೀತಿ ಖಂಡಿಸಿ ಬೈಕ್‌ರ್‍ಯಾಲಿ

» ಚಿತ್ರದುರ್ಗ

ಕೇಂದ್ರ ಸರ್ಕಾರದ ಜನ ವಿರೋಧಿ ನೀತಿ ಹಾಗೂ ರಾಜ್ಯ ಸರ್ಕಾರದ ರೈತ ವಿರೋಧಿ ಕೃಷಿ ಕಾಯಿದೆಗಳನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ನಗರದಲ್ಲಿ ಶುಕ್ರವಾರ ಬೈಕ್‌ರ್‍ಯಾಲಿ ನಡೆಸಿ ಜಿಲ್ಲಾಧಿಕಾರಿ ಕಚೇರಿ ಸಹಾಯಕರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿತು.

ಭಾರತೀಯ ಕಿಸಾನ್ ಯೂನಿಯನ್ ಕರೆಯ ಮೇರೆಗೆ ಕನಕ ವೃತ್ತದಿಂದ ಬೈಕ್ ರ್‍ಯಾಲಿ ಹೊರಟ ರೈತರು ಮಾರ್ಗದುದ್ದಕ್ಕೂ ಕೇಂದ್ರ